ಸಂಪುಟ : 9 ಸಂಚಿಕೆ 311 ಪುಟ : 4+2 ಬೆಲೆ: 3.00 ಶನಿವಾರ ಜನವರಿ 25 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 311 Pages : 4+2 Price : 3.00 Saturday January 25 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಾರ್ಷಿಕ ಸ್ನೇಹ ಸಮ್ಮೇಳನ ನಾಳೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಿ.ಸಿ. ಬಂಗಾರಿ ಪೂರ್ವ ಪ್ರಾಥಮಿಕ ಹಾಗೂ ಅನುದಾನಿತ ಪ್ರಾಥಮಿಕ ಶಾಲೆಯಲ್ಲಿ ಜ.26ರಂದು ಬೆಳಿಗ್ಗೆ 7–30ಕ್ಕೆ ಪ್ರಜಾರಾಜ್ಯೋತ್ಸವ ಧ್ವಜಾರೋಹಣ ಕಾರ್ಯಕ್ರಮ ನಡೆಯಲಿದ್ದು, ಅಧ್ಯಕ್ಷತೆಯನ್ನು ಬಾಲಲೀಲಾ ಮಾಹಾಂತ ಶಿವಯೋಗಿಗಳ ಶಿಕ್ಷಣ ಸಮಿತಿಯ ಅಧ್ಯಕ್ಷ ಎಂ.ಡಿ. ಬಟ್ಟೂರ ವಹಿಸಿಕೊಳ್ಳುವರು. ಮುಖ್ಯ ಅತಿಥಿಗಳಾಗಿ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಮಾಹಾವಿದ್ಯಾಲಯದ ಪ್ರಾಚಾರ್ಯ ಡಾ. ಆರ್.ಎಂ. ಕಲ್ಲನಗೌಡರ ಪಾಲ್ಗೊಳ್ಳುವರು.

ಸಾಯಂಕಾಲ 4 ಗಂಟೆಗೆ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಸಾನ್ನಿಧ್ಯವನ್ನು ಬಾಲಲೀಲಾ ಮಾಹಾಂತ ಶಿವಯೋಗಿ ಗವಿಮಠದ ಡಾ. ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಎಸ್.ಸಿ. ಬಡ್ನಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಡಾ. ರಾಜೇಂದ್ರ ಗಡಾದ ಭಾಗವಹಿಸುವುರೆಂದು ಪ್ರಾಚಾರ್ಯ ಎ.ಎಸ್. ಬೇಲೇರಿ ಹಾಗೂ ವಾಯ್.ಎಸ್. ಶಂಕಿನ ಪ್ರಕಟಣೆಗೆ ತಿಳಿಸಿದ್ದಾರೆ.

## ದರಪಟ್ಟಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯತ್ ಅನಿರ್ಭಂಧಿತ ಅನುದಾನದಡಿಯಲ್ಲಿ ಲಕ್ಷ್ಮೇಶ್ವರ ತಾಲೂಕಾ ಆಸ್ಪತ್ರೆಗೆ 09 ನಂ. ಸ್ಟೀಲ್ ಕಾಟ್ ಹಾಗೂ 10 ನಂ. ತ್ರೀಶೀಟರ್ ವಿಸಿಸ್ಟ್ ಕುರ್ಚಿಗಳನ್ನು ( ಏರ್ ಪೋರ್ಟ ಚೇರ್ ) ಪೂರೈಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಪೂರೈಕೆದಾರರು ಜನವರಿ 31 ರ ಮಧ್ಯಾಹ್ನ 3 ಗಂಟೆಯೊಳಗಾಗಿ (ರಜೆ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ದರ ನಮೂದಿಸುವಾಗ ಸಾಗಾಣಿಕೆ ವೆಚ್ಚ ಹಾಗೂ ತೆರಿಗೆ ಒಳಗೊಂಡಂತೆ ದರವನ್ನು ನಮೂದಿಸಬೇಕು.

ದರಪಟ್ಟಿಯನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ ಇವರ ಹೆಸರಿನಲ್ಲಿ ನೀಡತಕ್ಕದ್ದು . ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳ ಮೊಬೈಲ್ ನಂಬರ್ 9480865004 ನ್ನು ಸಂಪರ್ಕಿಸಬಹುದಾಗಿದೆ.

## ಆಕಸ್ಮಿಕ ಅಗ್ನಿ ಅವಘಡ: ಸ್ಕ್ರಾಪ್ ಗೋಡೌನ್ ಬೆಂಕಿಗಾಹುತಿ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಆಕಸ್ಮಿಕ ಅಗ್ನಿ ಕಾಣಿಸಿಕೊಂಡ ಹಿನ್ನೆಲೆ ಸ್ಕ್ರಾಪ್ ಗೋಡೌನ್ ಸಂಪೂರ್ಣವಾಗಿ ಬೆಂಕಿಗಾಹುತಿಯಾಗಿರುವ ಘಟನೆ ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯ ರಾಯಲ್ ಕೌಂಟಿಂ ಪಾರ್ಕ್ ಹಿಂಬಾಗದಲ್ಲಿ ಜರುಗಿದೆ. ಬೆಂಕಿಯ ಕೆನ್ನಾಲಿಗೆಗೆ ಗೋಡೌನ್ ನಲ್ಲಿದ್ದ ಸ್ಕ್ರಾಪ್ ಐಟಮ್ ಸುಟ್ಟು ಕರಕಲಾಗಿದೆ. ಶಾರ್ಟ್ ಸರ್ಕ್ಯೂಟ್ ನಿಂದ ಬೆಂಕಿ ಹೊತ್ತಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

### ಸಂವಿಧಾನ ಸನ್ಮಾನ, ಪುಸ್ತಕ ಲೋಕಾರ್ಪಣೆ ಹಾಗೂ ವಿಚಾರಗೋಷ್ಠಿ ಕಾರ್ಯಕ್ರಮದಲ್ಲಿ ಬಸವರಾಜ ಬೊಮ್ಮಾಯಿ


# ಸಂವಿಧಾನ ರಕ್ಷಣೆಯ ಜವಾಬ್ದಾರಿ ನಮ್ಮದು

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್‌ನವರು ಅಂಬೇಡ್ಕರ್ ಅವರಿಗೆ ಮಾಡಿರುವ ಅನ್ಯಾಯ, ಅಪಚಾರಕ್ಕೆ ಪ್ರಾಯಶ್ಚಿತ್ತ ಮಾಡಿಕೊಳ್ಳಲು ಕೈಯಲ್ಲಿ ಸಂವಿಧಾನ ಹಿಡಿದುಕೊಂಡು ತಿರುಗಾಡುತ್ತಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಶುಕ್ರವಾರ ಗದಗ ಶಹರದ ವಿಠ್ಠಲಾರೂಢ ಸಭಾಭವನದಲ್ಲಿ ಸಿಟಿಜನ್ಸ್ ಫಾರ್ ಸೋಷಿಯಲ್ ಜಸ್ಟೀಸ್ ಗದಗ ಹಾಗೂ ಭಾರತೀಯ ಜನತಾ ಪಾರ್ಟಿ ಗದಗ ಇವರ ವತಿಯಿಂದ ಏರ್ಪಡಿಸಿದ್ದ ಸಂವಿಧಾನ ಸನ್ಮಾನ, ಪುಸ್ತಕ ಲೋಕಾರ್ಪಣೆ ಹಾಗೂ ವಿಚಾರಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿದರು.

ಸಂವಿಧಾನ ರಚನೆಯಾಗಿ 75 ವರ್ಷ ಕಳೆದಿದೆ. ಅದರ ಪರ ಮತ್ತು ವಿರೋಧ ಯಾರಿದ್ದಾರೆ ಎಂಬ ಚರ್ಚೆ ನಡೆಯುತ್ತಿದೆ. ಸಂವಿಧಾನ ರಚನೆಯ ನಂತರ ಕಾಂಗ್ರೆಸ್‌ನವರು ಆಡಳಿತ ಶುರು ಮಾಡಿ ಸಂವಿಧಾನಕ್ಕೆ ಅಪಚಾರ ಮಾಡಿರುವುದು ಚರ್ಚಾ ವಿಷಯವಾಗಿದೆ. ಇಡೀ ಜಗತ್ತಿನಲ್ಲಿಯೇ ಶ್ರೇಷ್ಠವಾಗಿರುವ ಸಂವಿಧಾನ, ಜೀವಂತವಾಗಿರುವ, ಜನರಿಗೆ ಸ್ಪಂದಿಸುವ ಸಂವಿಧಾನ ಯಾವುದಾದರೂ ಇದ್ದರೆ ಅದು ಭಾರತದ ಸಂವಿಧಾನವಾಗಿದೆ ಎಂದರು. ಗಾಂಧೀಜಿಯವರ ಹೆಸರು ಹೇಳಬೇಕೆಂದರೆ ಕಾಂಗ್ರೆಸ್ ವಿಸರ್ಜನೆ ಆಗಬೇಕು. ಗಾಂಧೀಜಿ ಕೂಡ



ಸ್ವಾತಂತ್ರ್ಯ ಬಂದ ನಂತರ ಕಾಂಗ್ರೆಸ್ ವಿಸರ್ಜನೆ ಮಾಡಬೇಕು ಎಂದು ಹೇಳಿದ್ದರು. ಕಾಂಗ್ರೆಸ್‌ನವರು ಅಂಬೇಡ್ಕರ್ ಅವರಿಗೆ ಮಾಡಿರುವ ಅನ್ಯಾಯ, ಅಪಚಾರಕ್ಕೆ ಪ್ರಾಯಶ್ಚಿತ್ತ ಮಾಡಿಕೊಳ್ಳಲು ಕೈಯಲ್ಲಿ ಸಂವಿಧಾನ ಹಿಡಿದು–ಕೊಂಡು ತಿರುಗಾಡುತ್ತಿದ್ದಾರೆ. ಎಸ್ಸಿ–ಎಸ್ಟಿಗೆ ಮೀಸಲಿಟ್ಟಿದ್ದ ಹಣವನ್ನು ಲೂಟಿ ಮಾಡಿದವರು ಕಾಂಗ್ರೆಸ್‌ನವರು, ವಾಲ್ಮೀಕಿ ನಿಗಮದಲ್ಲಿ ಇಷ್ಟು ದೊಡ್ಡ ಹಗರಣವಾದರೂ ಯಾರಿಗೂ ಶಿಕ್ಷೆಯಾಗಲಿಲ್ಲ ಎಂದರು.

ಪ್ರಧಾನಿ ನರೇಂದ್ರ ಮೋದಿಯವರು ಸಂವಿಧಾನ ನನ್ನ ಧರ್ಮ ಗ್ರಂಥ ಎಂದು ಹೇಳಿದರು. ಬಿಜೆಪಿಯವರು ಸಂವಿಧಾನ ತಿದ್ದುಪಡಿ ಮಾಡಿದ್ದೇವೆ. ಕಾಶ್ಮೀರಕ್ಕೆ ಸ್ವಾತಂತ್ರ್ಯ ಕೊಡಲು 370ನೇ ವಿಧಿ ರದ್ದು ಮಾಡಲು ಸಂವಿಧಾನ ತಿದ್ದುಪಡಿ ಮಾಡಿದ್ದೇವೆ. ವಾಜಪೇಯಿಯವರು ಎಸ್ಸಿ–ಎಸ್ಟಿ ಆಯೋಗಕ್ಕೆ ಸಾಂವಿಧಾನಿಕ ಮಾನ್ಯತೆ ನೀಡಿದ್ದರು. ಪ್ರಧಾನಿ ನರೇಂದ್ರ ಮೋದಿಯವರು ಒಬಿಸಿ ಆಯೋಗಕ್ಕೆ ಸಂವಿಧಾನ ಮಾನ್ಯತೆ ನೀಡಲು ತಿದ್ದುಪಡಿ ಮಾಡಿದ್ದಾರೆ. ಕಾಂಗ್ರೆಸ್‌ನವರು ಸ್ವಾರ್ಥಕ್ಕಾಗಿ ಸಂವಿಧಾನ ತಿದ್ದುಪಡಿ ಮಾಡಿದರು. ಜನರ ಹಕ್ಕುಗಳನ್ನು ಕಿತ್ತು ಹಾಕಿದರು. ಯಾರೂ ಕೂಡ ಸರ್ಕಾರದ ವಿರುದ್ಧ ಮಾತನಾಡದಂತೆ ತುರ್ತು ಪರಿಸ್ಥಿತಿ ತಂದರು. ಸಂವಿಧಾನವನ್ನು ರಕ್ಷಣೆ ಮಾಡುವ ಜವಾಬ್ದಾರಿ ನಮ್ಮದಿದೆ. ಅದನ್ನು ನಾವು ಮಾಡುತ್ತೇವೆ ಎಂದು ಹೇಳಿದರು.

> ಕನಕದಾಸರ ರಾಮಧಾನ್ಯ ಚರಿತೆಯಲ್ಲಿ ರಾಗಿ ಮತ್ತು ಅಕ್ಕಿಗೆ ಹೋಲಿಕೆ ಮಾಡಿ ಸಮಾಜದಲ್ಲಿ ಸಮಾನತೆ ಬಗ್ಗೆ ಹೇಳಿದ್ದಾರೆ. ಅದೆಲ್ಲ ಅಂಶ ನಮ್ಮ ಸಂವಿಧಾನದಲ್ಲಿದೆ. ನಾವೆಲ್ಲ ಕಾನೂನಾತ್ಮಕ ಆಡಳಿತ ಮಾಡಬೇಕೆಂದು ಹೇಳುತ್ತೇವೆ. ಕಾನೂನಿನ ಅಡಿ ಎಲ್ಲರೂ ಸಮಾನರು. ಭ್ರಾತೃತ್ವ, ಸೌಹಾರ್ದತೆ, ಏಕತೆ, ಅಖಂಡತೆ ಇವೆಲ್ಲ ಸಂವಿಧಾನದಲ್ಲಿದೆ. ಇದರ ವಿರುದ್ಧ ಕಾಂಗ್ರೆಸ್ ಇದೆ. ಸ್ವಾತಂತ್ರ್ಯ ಬಂದ ಕೂಡಲೇ ಕಾಂಗ್ರೆಸ್ ದೇಶವನ್ನು ಇಬ್ಭಾಗ ಮಾಡಿತು. ಸಮಾನತೆ ಎಂದರೆ ಸಾಮಾಜಿಕ, ಆರ್ಥಿಕ ಸಮಾನತೆ ಇರಬೇಕೆಂದು ಸಂವಿಧಾನದಲ್ಲಿ ಹೇಳಿದೆ. ಕಾಂಗ್ರೆಸ್‌ನವರು ಆರ್ಥಿಕ ಅಸಮಾನತೆ ಉಂಟುಮಾಡಿದರು. ಗರೀಬಿ ಹಟಾವೊ ಅಂದರು, ಗರೀಬರನ್ನೇ ಹಟಾವೋ ಮಾಡುತ್ತಿದ್ದಾರೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಈ ಸಂಧರ್ಭದಲ್ಲಿ ಶಾಸಕರಾದ ಸಿ.ಸಿ. ಪಾಟೀಲ್, ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕರಾದ ಪಿ. ರಾಜೀವ, ಕಳಕಪ್ಪ ಬಂಡಿ, ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಎಸ್.ಸಿ ಮೋರ್ಚಾ ಜಿಲ್ಲಾಧ್ಯಕ್ಷ ಮಂಜುನಾಥ ಮುಳಗುಂದ, ಮುಖಂಡರಾದ ರವಿ ದಂಡಿನ, ಮಹೀಂದ್ರ ಕೌತಾಳ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

### ಪಿಎಲ್‌ಡಿ ಬ್ಯಾಂಕ್ ಚುನಾವಣೆಯ 14 ಸ್ಥಾನಗಳಲ್ಲಿ ಕಾಂಗ್ರೆಸ್ ಜಯಭೇರಿ


# ಕಾಂಗ್ರೆಸ್ ಕೈಹಿಡಿದ ಮತದಾರ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ಎಲ್ಲ 14 ಸ್ಥಾನಗಳನ್ನು ಗೆಲ್ಲುವ ಮೂಲಕ ಕಾಂಗ್ರೆಸ್ ಜಯಭೇರಿ ಬಾರಿಸಿದೆ.

ಜ. 5ರಂದು ಪಿಎಲ್‌ಡಿ ಬ್ಯಾಂಕ್‌ಗೆ ಮತದಾನ ನಡೆದಿತ್ತು. ಚುನಾವಣೆಗೂ ಮೊದಲು 14 ಸ್ಥಾನಗಳ ಪೈಕಿ 7 ಸ್ಥಾನಗಳು ಅವಿರೋಧವಾಗಿ ಆಯ್ಕೆಯಾಗಿದ್ದವು. ಉಳಿದ 7 ಸ್ಥಾನಗಳಿಗೆ ಚುನಾವಣೆ ನಡೆದಿತ್ತಲ್ಲದೆ ಮತಗಳ ಎಣಿಕೆ ಕಾರ್ಯವೂ ಪೂರ್ಣಗೊಂಡಿತ್ತು. ನ್ಯಾಯಲಯದಲ್ಲಿ ಪ್ರಕರಣ ಇದ್ದುದರಿಂದ ಫಲಿತಾಂಶ ಘೋಷಣೆಯಾಗಿರಲಿಲ್ಲ.

ಇನ್ನು ಮತಗಳ ಎಣಿಕೆ ಸಂಧರ್ಭದಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳು ಭಾರೀ ಮುನ್ನಡೆಯಲ್ಲಿರುವದರಿಂದ 6 ಜನ ಅಭ್ಯರ್ಥಿಗಳು ನ್ಯಾಯಾಲಯದಲ್ಲಿ ತಾವು



ಸಲ್ಲಿಸಿದ್ದ ಅರ್ಜಿಗಳನ್ನು ವಾಪಸ್ಸು ಪಡೆದಿದ್ದರು. ಹೀಗಾಗಿ ಕಾಂಗ್ರೆಸ್ ಬೆಂಬಲಿತ 6 ಅಭ್ಯರ್ಥಿಗಳು ಗೆಲುವಿನ ನಗೆ ಬೀರಿದ್ದರು. ಆದರೆ ಸವಡಿ ಸಾಲಗಾರರ ಕ್ಷೇತ್ರದ ಅಭ್ಯರ್ಥಿ ಸಲ್ಲಿಸಿದ್ದ ಅರ್ಜಿಯನ್ನು ಹಿಂದಕ್ಕೆ ಪಡೆದಿರಲಿಲ್ಲ. ಹೀಗಾಗಿ ನ್ಯಾಯಲಯ ಜ.24ರಂದು ಮತಗಳ ಎಣಿಕೆ ಕಾರ್ಯ ನಡೆಸುವಂತೆ ಆದೇಶ ಮಾಡಿತ್ತು.

ಈ ದಿಸೆಯಲ್ಲಿ ಚುನಾವಣಾಧಿಕಾರಿ ಮತಗಳ ಎಣಿಕೆ ಕಾರ್ಯವನ್ನು ನಡೆಸಿದರು. ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಅನುಸೂಯಾ ಪರಡ್ಡಿ 149 ಮತಗಳನ್ನು ಪಡೆದರೆ, ಬಿಜೆಪಿ ಬೆಂಬಲಿತ ಅಭ್ಯರ್ಥಿ ಅಕ್ಕಮಹಾದೇವಿ ನರೆಗಲ್ಲ 104 ಮತಗಳನ್ನು ಪಡೆದರು. 149 ಮತಗಳನ್ನು ಪಡೆದ ಅನುಸೂಯಾ ಪರಡ್ಡಿ ಗೆಲುವು ಸಾಧಿಸಿದ್ದಾರೆ ಎಂದು ಚುನಾವಣಾಧಿಕಾರಿಗಳು ಘೋಷಣೆ ಮಾಡುತ್ತಿದ್ದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ವಿಜಯೋತ್ಸವವನ್ನು ಆಚರಿಸಿದರು.

> ಶಾಸಕ ಜಿ.ಎಸ್. ಪಾಟೀಲರು ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ರೈತರು ಪಕ್ಷದ 14 ಅಭ್ಯರ್ಥಿಗಳಿಗೆ ಮತಗಳನ್ನು ನೀಡಿ ಗೆಲ್ಲಿಸಿದ್ದಾರೆ. ಇನ್ನು ಜಿ.ಪಂ, ತಾ.ಪಂ ಚುನಾವಣೆಯಲ್ಲಿ ಮತಕ್ಷೇತ್ರದ ಎಲ್ಲ ಸ್ಥಾನಗಳನ್ನು ಕಾಂಗ್ರೆಸ್ ಗೆಲ್ಲುವುದರಲ್ಲಿ ಯಾವುದೇ ಸಂದೇಹವಿಲ್ಲ.
>
> – ವಿ.ಆರ್. ಗುಡಿಸಾಗರ. ಹಿರಿಯ ಮುಖಂಡರು.

ವಿ.ಆರ್. ಗುಡಿಸಾಗರ, ಪರಶುರಾಮ ಅಳಗವಾಡಿ, ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ, ಯಚ್ಚರಗೌಡ ಗೋವಿದಗೌಡರ್, ಕುಬೇರಗೌಡ ಪರಡ್ಡಿ, ಬಸವರಾಜ ಜಗ್ಗಲ ಸೇರಿದಂತೆ ಅನೇಕ ಮುಖಂಡರು ವಿಜಯೋತ್ಸವದ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಜ.26ರಂದು ಪಂಜಿನ ಮೆರವಣಿಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ಬ್ರಿಟಿಷರ ಪಾಲಿಗೆ ಸಿಂಹಸ್ವಪ್ನವಾಗಿ, ತನ್ನ ಇಡೀ ಜೀವನವನ್ನು ಸ್ವಾತಂತ್ರ್ಯ ಹೋರಾಟಕ್ಕೆ ಮೀಸಲಿಟ್ಟು ಕೊನೆಗೆ ದೇಶಕ್ಕಾಗಿ ವೀರಮರಣ ಹೊಂದಿದ ಕ್ರಾಂತಿಕಾರಿ ಹೋರಾಟಗಾರ ಸಂಗೊಳ್ಳಿ ರಾಯಣ್ಣನವರ ಪುಣ್ಯಸ್ಮರಣೆ ಅಂಗವಾಗಿ ಜನವರಿ 26ರಂದು ಸಾಯಂಕಾಲ 6.30ಕ್ಕೆ ಪಂಜಿನ ಮೇರವಣಿಗೆ ನಡೆಯಲಿದೆ ಎಂದು ಕ್ರಾಂತಿಸೇನಾ ಸಂಘಟನೆಯ ಗೌರವಾಧ್ಯಕ್ಷ ಪ್ರವೀಣ ಹಬೀಬ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಜಿಲ್ಲಾ ಕ್ರಾಂತಿಸೇನಾ ಸಂಘಟನೆ ಹಾಗೂ ಸಂಗೊಳ್ಳಿ ರಾಯಣ್ಣನ ಅಭಿಮಾನಿಗಳು ಈ ಕಾರ್ಯಕ್ರಮ ಆಯೋಜನೆ ಮಾಡಿದ್ದು, ಮೇರವಣಿಗೆಯು ಕಿತ್ತೂರ ಚೆನ್ನಮ್ಮ ಸರ್ಕಲ್‌ನಿಂದ ಅರಂಭವಾಗಿ, ಪೋಸ್ಟ್ ಆಫೀಸ್ ಮುಂಭಾಗ, ಪಂಚರೌಂಡ್ ಮೂಲಕ ಸಾಗಿ ಬಸವೇಶ್ವರ ಸರ್ಕಲ್‌ನಲ್ಲಿರುವ ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ನಡೆಯಲಿದೆ. ಹುಯಿಲಗೋಳ ನಾರಾಯಣರಾವ್ ಸರ್ಕಲ್, ಮಹೇಂದ್ರಕರ್ ಸರ್ಕಲ್, ಶ್ರೀ ತೆ–ೂಂಟದಾರ್ಯ ಆಟೋ ನಿಲ್ದಾಣ, ಗಾಂಧಿ ಸರ್ಕಲ್ ಮಾರ್ಗವಾಗಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸರ್ಕಲ್‌ನಲ್ಲಿ ಸಂಪನ್ನವಾಗಲಿದ್ದು, ಎಲ್ಲ ದೇಶಭಕ್ತರು ಈ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಜಿಲ್ಲಾ ಶ್ರೀ ಮಹರ್ಷಿ ವಾಲ್ಮೀಕಿ ಮದಕರಿ ನಾಯಕರ ಗಜಪಡೆ ಟ್ರಸ್ಟ್ ಅಧ್ಯಕ್ಷ ಕಿರಣ್ ಯಲ್ಲಪ್ಪ ನಾಯ್ಕರ್, ಪ್ರದೀಪ್ ಸರ್ವದೆ, ರಾಮು ಗಡಾದ, ಕುಮಾರ ಮಾರನಬಸರಿ, ಶ್ರೀಕಾಂತ ಹೊಸಮನಿ ಉಪಸ್ಥಿತರಿದ್ದರು.

## ಅಪಘಾತ ರಹಿತ ಸೇವೆ ನಿಮ್ಮದಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಚಾಲನಾ ಸಿಬ್ಬಂದಿಗಳ ದಿನಾಚರಣೆ ನಿಮಿತ್ತ ಶುಕ್ರವಾರ ವಾ.ಕ.ರ.ಸಾ ಸಂಸ್ಥೆಯ ಲಕ್ಷ್ಮೇಶ್ವರ ಘಟಕದ ವ್ಯವಸ್ಥಾಪಕಿ ಸವಿತಾ ಆದಿ ಕರ್ತವ್ಯನಿರತ ಚಾಲನಾ ಸಿಬ್ಬಂದಿಗಳಿಗೆ ಹೂವು ನೀಡಿ, ಸಿಹಿ ಹಂಚುವುದರ ಮೂಲಕ ಶುಭ ಕೋರಿದರು.

ಈ ಸಂದರ್ಭದಲ್ಲಿ



ಮಾತನಾಡಿದ ಅವರು, ಚಾಲಕ–ನಿರ್ವಾಹಕರು ತಮ್ಮ ನಿತ್ಯದ ಬದುಕಿನ ಕಷ್ಟಗಳನ್ನು ಬದಿಗೊತ್ತಿ, ನಿತ್ಯ ಬರುವ ಹತ್ತಾರು ಸಂಕಷ್ಟಗಳನ್ನು ಎದುರಿಸುತ್ತಾ, ಸಾರ್ವಜನಿಕರಿಗೆ ವಿಶ್ರಾಂತಿ ರಹಿತ ಸೇವೆಯನ್ನು ನೀಡುತ್ತಾರೆ. ಅಪಘಾತ ರಹಿತ ಸೇವೆ ನಿಮ್ಮದಾಗಿರಲಿ ಮತ್ತು ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ ಎಂದರು.

ಈ ವೇಳೆ ಸಾರಿಗೆ ನಿಯಂತ್ರಕ ಎಂ.ಎಸ್. ಶಿರಬಡಗಿ, ಹನುಮಂತಪ್ಪ ವ್ಯಾಟೆಣ್ಣವರ ಸೇರಿದಂತೆ ಸಿಬ್ಬಂದಿಗಳಿದ್ದರು.

### ಸ್ಲಂ ಜನಾದೋಲನ ಕರ್ನಾಟಕ, ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಮುಖ್ಯಮಂತ್ರಿಗಳಿಗೆ ಮನವಿ

# ಬಡ್ಡಿ ದಂಧೆಕೋರರ ಹಾವಳಿಗೆ ಕಡಿವಾಣ ಹಾಕಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ನಗರ ಹಾಗೂ ಗ್ರಾಮೀಣ ಭಾಗದ ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಸುಲಭ ಹಾಗೂ ಅಧಿಕ ಬಡ್ಡಿ ದರದಲ್ಲಿ ಸಾಲವನ್ನು ನೀಡುತ್ತಿರುವ ಮೈಕ್ರೋ ಫೈನಾನ್ಸ್‌ಗಳು ಸಾಲ ವಸೂಲಿಗಾಗಿ ಜನರಿಗೆ ಕಿರುಕುಳ ನೀಡುತ್ತಿರುವುದರಿಂದ ರಾಜ್ಯದಲ್ಲಿ ಸಾಲ ಪಡೆದಿರುವ ಬಡ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮೈಕ್ರೋ ಫೈನಾನ್ಸ್‌ಗಳ ವ್ಯಾಪಕ ಕಿರುಕುಳಕ್ಕೆ ಹೆದರಿ ಗ್ರಾಮಗಳನ್ನೇ ತೊರೆ–ಯುತ್ತಿದ್ದಾರೆ. ಆತ್ಮಹತ್ಯೆಗಳೂ ನಡೆಯುತ್ತಿದ್ದು, ತಕ್ಷಣ ಬಡ ಜನರ ರಕ್ತ ಹೀರುತ್ತಿರುವ ಮೈಕ್ರೋ ಫೈನಾನ್ಸ್ ಹಾಗೂ ಬಡ್ಡಿ ದಂಧೆ–ಕೋರರ ಹಾವಳಿಗೆ ಕಡಿವಾಣ ಹಾಕುವಂತೆ ಸ್ಲಂ ಜನಾದೋಲನ ಕರ್ನಾಟಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ



ಮನವಿ ಸಲ್ಲಿಸಿ ಮಾತನಾಡಿ, ನಮ್ಮ ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ಹೆಚ್ಚಾಗಿದೆ. ದಿನದಿಂದ ದಿನಕ್ಕೆ ಪ್ರಾಣ ಕಳೆದುಕೊಳ್ಳವವರ ಸಂಖ್ಯೆ ಹೆಚ್ಚುತ್ತಿದೆ. ಬಡ ಕುಟುಂಬಗಳಿಗೆ ಆಸೆ–ಆಮಿಷಗಳನ್ನು ತೋರಿಸಿ ಸಾಲ ನೀಡುತ್ತಿರುವ ಮೈಕ್ರೋ ಫೈನಾನ್ಸ್‌ಗಳು ಸಾಲ ವಸೂಲಾತಿ ಸಂರ್ಭದಲ್ಲಿ ಬಡ್ಡಿ ಮೇಲೆ ಬಡ್ಡಿ ಹಾಕಿ ಸಾಲಗಾರರಿಂದ ಹಣ ವಸೂಲಿ ಮಾಡುತ್ತಿರುವುದ್ದರಿಂದ ಸಾಲ ಪಡೆದುಕೊಂಡಿರುವ ಬಡ ಕುಟುಂಬಗಳು ತಮ್ಮ ಮನೆಗಳಿಗೆ ಬೀಗ ಹಾಕಿ ಊರುಗಳನ್ನು ಬಿಟ್ಟು ಹೋಗುತ್ತಿದ್ದಾರೆ ಎಂದರು.

> ಕೂಡಲೇ ಮುಖ್ಯಮಂತ್ರಿಗಳು ಎಚ್ಚೆತ್ತು ಮೈಕ್ರೋ ಫೈನಾನ್ಸ್‌ಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ವಸೂಲಿ ನೆಪದಲ್ಲಿ ಬಡವರಿಗೆ ಕಿರುಕುಳ ನೀಡುತ್ತಿರುವ ಫೈನಾನ್ಸ್ ಸಿಬ್ಬಂದಿಗಳ ಮೇಲೆ ಗೂಂಡಾ ಕಾಯ್ದೆಯಡಿ ಬಂಧಿಸಲು ರಾಜ್ಯದ ಪೊಲೀಸ್ ಇಲಾಖೆಗೆ ಆದೇಶಿಸಬೇಕು, ಕಠಿಣ ಕಾನೂನು ಜಾರಿಗೆ ತರಬೇಕೆಂದು ಒತ್ತಾಯಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ರವಿಕುಮಾರ ಬೆಳಮಕರ, ಕಾರ್ಯದರ್ಶಿ ಅಶೋಕ ಕುಸಬಿ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಮೆಹಬೂಬಸಾಬ ಬಳ್ಳಾರಿ, ಮಂಜುನಾಥ ಶ್ರೀಗಿರಿ, ಮಕ್ತುಮಸಾಬ ಮುಲ್ಲಾನವರ, ಖಾಜಾಸಾಬ ಬಳ್ಳಾರಿ, ಶಂಕ್ರಪ್ಪ ರೋಣದ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಸಂಪಾದಕೀಯ

# ಮೈಕ್ರೋ ಫೈನಾನ್ಸ್ ಸುತ್ತ ಮುತ್ತ

ರಾಜ್ಯಾದ್ಯಂತ ಈಗ ಮೈಕ್ರೋ ಫೈನಾನ್ಸ್ ಗಳದ್ದೆ ಚರ್ಚೆ. ಸಾಲ ಕೊಟ್ಟು ಅಮಾನವೀಯವಾಗಿ ವಸೂಲಿ ಮಾಡುತ್ತಿರುವ ಮೈಕ್ರೋ ಫೈನಾನ್ಸ್ ಗಳ ಕಿರುಕುಳದ ಕಥೆಗಳು ಮಾಧ್ಯಮಗಳಲ್ಲಿ ನಿತ್ಯವೂ ಪ್ರಸಾರವಾಗುತ್ತಲೆ ಇದೆ.

ಜನರ ಕಷ್ಟಗಳು ಮಿತಿಮೀರಿದ ನಂತರ ಸರಕಾರವೂ ಎಚ್ಚೆತ್ತಕೊಂಡಿದೆ. ಮೈಕ್ರೋ ಫೈನಾನ್ಸ್ ಗಳ ಮೇಲೆ ಮೂಗುದಾರ ಹಾಕುವ ಕೆಲಸಕ್ಕೆ ಮುಂದಾಗಿದೆ. ಯಾವ ರೀತಿಯ ಕಡಿವಾಣ ಹಾಕುತ್ತದೆ ಎನ್ನುವುದಕ್ಕೆ ಇನ್ನು ಸರಕಾರ ಸ್ಪಷ್ಟನೆ ಕೊಟ್ಟಿಲ್ಲ. ಸದ್ಯಕ್ಕೆ ಜನರ ಕಷ್ಟಗಳಿಗೆ ಸ್ಪಂದಿಸುವ ಸಲುವಾಗಿ ಮೈಕ್ರೋ ಫೈನಾನ್ಸ್ ನಿಯಂತ್ರಣಕ್ಕೆ ಕಾನೂನು ಜಾರಿ ಮಾಡುವುದಾಗಿ ಕಾನೂನು ಸಚಿವ ಎಚ್.ಕೆ. ಪಾಟೀಲ ಹೇಳಿದ್ದಾರೆ. ಅದು ಯಾವ ರೀತಿಯ ಕಾನೂನು ಎನ್ನುವುದಕ್ಕೆ ಮುಂದಿನ ಅಧಿವೇಶನದ ವರೆಗೆ ಕಾಯುವುದು ಅನಿವಾರ್ಯವಾಗಿದೆ.

ಮೈಕ್ರೋ ಫೈನಾನ್ಸ್ ಗಳ ಈ ಕಥೆಯನ್ನು ಸೂಕ್ಷ್ಮವಾಗಿ ಅವಲೋಕನ ನಡೆಸಿದಾಗ ಎರಡು ಅಂಶಗಳು ಕಂಡುಬರುತ್ತವೆ. ಒಂದು ಜನರಿಗೆ ರಾಷ್ಟ್ರೀಕೃತ ಬ್ಯಾಂಕಿನಿಂದ ಸಾಲ ಸಿಗದಿದ್ದಾಗ ಮೈಕ್ರೋ ಫೈನಾನ್ಸ್ ಮೊರೆ ಹೋಗುತ್ತಾರೆ. ಇನ್ನೊಂದು ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಸಾಲ ಪಡೆದು, ಅಲ್ಲಿ ಕಟಬಾಕಿದಾರರಾಗಿ ಮತ್ತೊಂದು ಆರ್ಥಿಕ ಸಂಕಷ್ಟದಿಂದ ಹೊರಬರಲು ಮೈಕ್ರೋ ಫೈನಾನ್ಸ್ ನಿಂದ ಸಾಲ ಪಡೆಯುತ್ತಾರೆ. ಈ ಎರಡನೆ ವರ್ಗದ ಜನರಿಗೆ ಸಾಲ ಪಡೆಯಲು ಮೈಕ್ರೋ ಫೈನಾನ್ಸ್ ಗಳೆ ಆಗಬೇಕು ಎಂದೇನಿಲ್ಲ. ಯಾರಿಂದ ಸಾಲ ಸಿಕ್ಕರೂ ಪಡೆಯುತ್ತಾರೆ.

ಇಲ್ಲಿ ಗಮನಿಸಬೇಕಾದ ಮತ್ತೊಂದು ಅಂಶ ಎಂದರೆ, ಗ್ರಾಮೀಣ ಭಾಗದಲ್ಲಿ ಹೀಗೆ ಮೈಕ್ರೋ ಫೈನಾನ್ಸ್ ನಿಂದ ಪಡೆದ ಬಹುತೇಕ ಸಾಲ ವೈಯಕ್ತಿಕ ವ್ಯವಹಾರಕ್ಕೆ ಸಂಬಂಧಿಸಿದ್ದೆ ಆಗಿರುತ್ತದೆ. ಯಾವುದೇ ವೈಯಕ್ತಿಕ ಕೆಲಸಕ್ಕೆ, ತುರ್ತು ಪರಿಸ್ಥಿತಿಯಲ್ಲಿ ಯಾರಿಂದಲೊ ಪಡೆದ ಸಾಲವನ್ನು ಮರಳಿಸಲು ಮತ್ತೊಂದು ಕಡೆ ಸಾಲ ಪಡೆದ ಪ್ರಕರಣಗಳೆ ಹೆಚ್ಚಿರುತ್ತವೆ. ಅನಿವಾರ್ಯ ಕಾರಣಗಳಿಂದ ಸಾಲ ತೀರಿಸಲಾಗದಿದ್ದರೆ ಕಿರುಕುಳ ಆರಂಭವಾಗುತ್ತದೆ.

ಆರ್ಥಿಕ ಶಿಸ್ತು ಇದ್ದವರು ಪಡೆದ ಸಾಲವನ್ನು ಬಂಡವಾಳವಾಗಿ ಉಪಯೋಗಿಸಿಕೊಂಡು ಸಾಲ ತೀರಿಸುತ್ತಾರೆ. ಆದರೆ ಮಾಡಿದ ಸಾಲವನ್ನು ತೀರಿಸಲು ಮತ್ತೊಂದು ಸಾಲ, ವೈಯಕ್ತಿಕ ಸಮಸ್ಯೆಗೆ ಬಳಕೆ ಮಾಡಿಕೊಂಡರೆ, ಬೆವರು ಸುರಿಸಿ ಆ ಸಾಲ ತೀರಿಸುವದು ಕಷ್ಟವಾಗುತ್ತದೆ. ಆಗ ಈ ರೀತಿಯ ಕಿರುಕುಳಕ್ಕೆ ಒಳಗಾಗಬೇಕಾಗುತ್ತದೆ.

ಮೈಕ್ರೋ ಫೈನಾನ್ಸ್ ಸಹ ಸಣ್ಣ ಆರ್ಥಿಕ ಸಂಸ್ಥೆಯಾದ ಕಾರಣ ಪ್ರತಿಯೊಬ್ಬ ಸಾಲಗಾರನನ್ನೂ ಗಂಭೀರವಾಗಿ ಪರಿಗಣಿಸುತ್ತಾರೆ. ಸಾಲ ವಸೂಲಾತಿಗೆ ಅನೇಕ ರೀತಿಯ ಕ್ರಮಗಳನ್ನು ಅನುಸರಿಸುತ್ತಾರೆ. ಕೆಲ ಕಂಪನಿಗಳ ಏಜೆಂಟರು ಮಾಡುವ ಅಮಾನವೀಯ ಕೃತ್ಯಕ್ಕೆ ಇಡೀ ಮೈಕ್ರೋ ಫೈನಾನ್ಸ್ ವ್ಯವಸ್ಥೆಯೆ ಇವತ್ತು ಕಟಕಟೆಗೆ ನಿಲ್ಲುವಂತಾಗಿದೆ. ಹೀಗಾಗಿ ಸರಕಾರ ಸಾಲ ಅಮಾನವೀಯ ರೀತಿಯಲ್ಲಿ ಸಾಲ ವಸೂಲಾತಿಗೆ ಮಾತ್ರ ತಡೆ ನೀಡುವಂತಾದರೆ ಮೈಕ್ರೋ ಫೈನಾನ್ಸ್ ಗೂ ಅನುಕೂಲ, ಅದರಿಂದ ಲಾಭ ಪಡೆಯುತ್ತಿರುವ ಗ್ರಾಮೀಣ ಭಾಗದ ಜನರಿಗೂ ಅನುಕೂಲವಾಗಲಿದೆ.

### ಜನವರಿ 25, ರಾಷ್ಟ್ರೀಯ ಮತದಾರರ ದಿನಾಚರಣೆ ನಿಮಿತ್ತ ವಿಶೇಷ ಲೇಖನ

# ಮತದಾರ, ನಿನ್ನ ಜವಾಬ್ದಾರಿ ಮರೆಯದಿರು

ಮತದಾರ ಎಂದರೆ ಮತದಾನದ ಕಾನೂನುಬದ್ಧ ಹಕ್ಕನ್ನು ಹೊಂದಿರುವ ನಾಗರಿಕ ಎಂದು ವ್ಯಾಖ್ಯಾನ ನೀಡಲಾಗುತ್ತದೆ. ಇನ್ನೂ ಸರಳವಾಗಿ ಹೇಳುವುದಾದರೆ, ಚುನಾವಣೆಯಲ್ಲಿ ಮತ ಚಲಾಯಿಸಲು ಅರ್ಹರಾಗಿರುವವರು ಅಥವಾ ನಿಜವಾಗಿ ಮತ ಚಲಾಯಿಸುವ ವ್ಯಕ್ತಿಯೇ ಮತದಾರ.

ಪ್ರಪಂಚದ ಬಹುದೊಡ್ಡ ಪ್ರಜಾಪ್ರಭುತ್ವ ದೇಶಗಳಲ್ಲಿ ಭಾರತವು ಅಗ್ರಸ್ಥಾನ ಪಡೆದಿದೆ. ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಲು ಮುಕ್ತ ಹಾಗೂ ನ್ಯಾಯಸಮ್ಮತವಾದ ಚುನಾವಣೆಗಳು ಪ್ರಮುಖ ಪಾತ್ರ ವಹಿಸುತ್ತವೆ. ಹಾಗೆಯೇ ಚುನಾವಣೆ ಸಂದರ್ಭದಲ್ಲಿ ಮತದಾರರ ಪಾತ್ರ ಅಷ್ಟೇ ಮಹತ್ವದ್ದಾಗಿರುತ್ತದೆ. ಪ್ರಜಾಪ್ರಭುತ್ವ ಬಲಪಡಿಸುವಲ್ಲಿ ಹಾಗೂ ಮುಕ್ತ ಆಡಳಿತ ನಡೆಸುವಂತಾಗಲು ಮತದಾರರ ನೀಡುವ ಒಂದೊಂದು ಮತಗಳೂ ಅವಶ್ಯವಾಗಿವೆ.

ಮತದಾರರ ರಾಷ್ಟ್ರೀಯ ಪ್ರಜ್ಞೆ, ಮತದಾನದ ಪಾವಿತ್ರ್ಯತೆ, ಉತ್ತಮ ಅಭ್ಯರ್ಥಿಗಳ ಆಯ್ಕೆ ಮಾಡುವ ವಿವೇಚನೆ ಬೆಳೆಸಿಕೊಂಡಿಬೇಕು. ಯಾರದೋ ಮಾತಿಗೆ ಕಟ್ಟುಬಿದ್ದು ಮತವನ್ನು ಮೀಸಲಿಡದೇ ಸ್ವಂತ ವಿವೇಚನೆಯಿಂದ ಮತ ಚಲಾಯಿಸಿ ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡುವಲ್ಲಿ ತನ್ನ ಮತವನ್ನು ಮತದಾನದಲ್ಲಿ ಒಂದು ಅಸ್ತ್ರವನ್ನಾಗಿ ತನ್ನ ಬತ್ತಳಿಕೆಯಲ್ಲಿ ಇಟ್ಟುಕೊಂಡಿರಬೇಕು.




ಭಾರತದ ಚುನಾವಣಾ ಆಯೋಗವು ಒಂದು ಸಾಂವಿಧಾನಿಕ ಸಂಸ್ಥೆಯಾಗಿದ್ದು, ಭಾರತದಲ್ಲಿ ಶಾಸಕಾಂಗದ ಎಲ್ಲಾ ಹಂತಗಳಲ್ಲಿ ಮುಕ್ತ ಮತ್ತು ನ್ಯಾಯಯುತ ಚುನಾವಣೆಗಳನ್ನು ನಡೆಸುವ ಜವಾಬ್ದಾರಿಯನ್ನು ಹೊಂದಿದೆ. ಹೊಸ ಮತದಾರರನ್ನು ಸೆಳೆಯಲು, ಉತ್ತೇಜಿಸಲು ಹಾಗೂ ಮತದಾರರ ಸಂಖ್ಯೆಯನ್ನು ಹೆಚ್ಚಳ ಮಾಡುವ ನಿಟ್ಟಿನಲ್ಲಿ ಭಾರತದಾದ್ಯಂತ ಪ್ರತಿವರ್ಷ ಜನವರಿ 25ರಂದು 'ರಾಷ್ಟ್ರೀಯ ಮತದಾರರ ದಿನ'ವನ್ನಾಗಿ ಆಚರಿಸಲಾಗುತ್ತಿದೆ.

ದೇಶದ ಮತದಾರರಿಗೆ ಮೀಸಲಾಗಿರುವ ಈ ದಿನವನ್ನು ಮತದಾರರಲ್ಲಿ ಜಾಗೃತಿ ಮೂಡಿಸಲು ಮತ್ತು ಚುನಾವಣಾ ಪ್ರಕ್ರಿಯೆಯ ತಿಳುವಳಿಕೆ ನೀಡಲು ಆಚರಣೆ ಮಾಡಲಾಗುತ್ತದೆ. ಚುನಾವಣಾ ಆಯೋಗದ ಸಂಸ್ಥಾಪನಾ ದಿನವನ್ನು ಗುರುತಿಸಲು ಜನವರಿ 25, 2011ರಿಂದ ಪ್ರತಿ ವರ್ಷ ಈ ದಿನವನ್ನು ಆಚರಿಸುತ್ತಾ ಬರಲಾಗುತ್ತಿದೆ. ಈ ದಿನದ ಕಾರ್ಯಕ್ರಮದಲ್ಲಿ ಹೊಸ ಮತದಾರರಿಗೆ ಮತದಾರರ ಗುರುತಿನ ಚೀಟಿಯನ್ನು ಹಸ್ತಾಂತರ ಮಾಡಲಾಗುತ್ತದೆ. ಈ ಸಂದರ್ಭದಲ್ಲಿ ಮುಖ್ಯ ಚುನಾವಣಾಧಿಕಾರಿಯಾಗಿದ್ದ ಟಿ.ಎನ್. ಶೇಷನ್ ಅವರು ಮಾಡಿಹೋದ ಬದಲಾವಣೆ ಇಂದಿಗೂ ಕೂಡ ಜನಹಿತಕ್ಕಾಗಿ ರೂಪಿಸಿದ್ದರು. ಮತದಾನ ನಮ್ಮ ಪ್ರಥಮ ಕರ್ತವ್ಯವಾಗಿದ್ದು, ಬದ್ಧತೆಯಿಂದ ಆ ಕಾರ್ಯದಲ್ಲಿ ಭಾಗಿಯಾಗುವುದು ನಮ್ಮ ಪ್ರಥಮ ಆದ್ಯತೆಯಾಗಬೇಕು.

ಮತದಾರರ ದಿನವನ್ನು ಆಚರಿಸುವ ಕಾರ್ಯಸೂಚಿಯು ಮತದಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸುವುದು, ವಿಶೇಷವಾಗಿ ದೇಶದ ಹೊಸದಾಗಿ ಅರ್ಹ ಮತದಾರರಲ್ಲಿ ಮತದಾನದ ಪ್ರಾಮುಖ್ಯತೆಯ ಬಗ್ಗೆ ಮಾಹಿತಿ ನೀಡುವುದು ಆಗಿದೆ. ಮತದಾನವು ಒಂದು ದೇಶದ ಸರ್ಕಾರವನ್ನು ರಚಿಸಲು ಸಹಾಯ ಮಾಡುವ ಮೂಲಭೂತ ಪ್ರಕ್ರಿಯೆಯಾಗಿದೆ. ಜನರು ಮತದಾನದ ಮೂಲಕ ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡಿಕೊಳ್ಳಬಹುದು. ಮತದಾನದ ಹಕ್ಕುಗಳು ಜನರಿಗೆ ಸಮಸ್ಯೆಗಳ ಬಗ್ಗೆ ಸರ್ಕಾರವನ್ನು ಪ್ರಶ್ನಿಸುವ ಹಕ್ಕಿಗೆ ಇನ್ನಷ್ಟು ಬಲ ತುಂಬುತ್ತದೆ. ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಈ ಮತದಾನವು ಪ್ರಮುಖವಾಗಿದೆ.

'ಭಾರತದ ಪ್ರಜೆಗಳಾದ ನಾವು, ಪ್ರಜಾಪ್ರಭುತ್ವದಲ್ಲಿ ಅಚಲವಾದ ನಂಬಿಕೆಯನ್ನು ಹೊಂದಿದ್ದೇವೆ. ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳನ್ನು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿಹಿಡಿಯಲು ಮತ್ತು ಪ್ರತಿ ಚುನಾವಣೆಯಲ್ಲಿ ನಿರ್ಭಯವಾಗಿ ಮತ್ತು ಧರ್ಮದ ಪರಿಗಣನೆಗೆ, ಜನಾಂಗ, ಜಾತಿ, ಸಮುದಾಯ, ಭಾಷೆ ಅಥವಾ ಯಾವುದೇ ಪ್ರಚೋದನೆಗೆ ಒಳಗಾಗದೆ ಮತ ಚಲಾಯಿಸುತ್ತೇವೆ ಎಂದು ಈ ಮೂಲಕ ಪ್ರತಿಜ್ಞೆ ಮಾಡುತ್ತೇವೆ'

ಶ್ಯಾಮ್ ಸರಣ್ ನೇಗಿ ಇವರು ಹಿಮಾಚಲ ಪ್ರದೇಶದ ಕಿನ್ನೌರ್ ಜಿಲ್ಲೆಯಲ್ಲಿ 1951ನೇ ಇಸವಿಯಲ್ಲಿ ಸ್ವತಂತ್ರ ಭಾರತದ ಮೊದಲ ಮತದಾರರಾಗಿ ಇತಿಹಾಸ ಬರೆದರು. ಮತ ಚಲಾವಣೆಗೆ ಶ್ಯಾಮ್ ಸರಣ್ ನೇಗಿ ಅವರು ಬಂದರೆ ಮಾಧ್ಯಮಗಳು ಕಿಕ್ಕಿರಿಯುತ್ತವೆ. ಇಂದಿಗೂ ಅವರು ವಿಐಪಿ. ಆದರೆ 2023ನೇ ಇಸವಿಯಲ್ಲಿ ನಿಧನರಾದರು.

ಒಟ್ಟಾರೆಯಾಗಿ ಮುಂಬರುವ ಎಲ್ಲಾ ಚುನಾವಣೆಯಲ್ಲಿ ಎಲ್ಲರೂ ಮತ ಚಲಾಯಿಸುವ ಪ್ರತಿಜ್ಞೆ ಮಾಡೋಣ. ನಮ್ಮ ಮುಂದಿನ ಮತದಾರರಿಗೆ, ಯಾವುದೇ ಆಮಿಷಕ್ಕೆ ಬಲಿಯಾಗದೇ ಮತ ಚಲಾಯಿಸಲು ಪ್ರೇರಣೆ ನೀಡೋಣ. ಶಾಸನ ಮಾಡುವಾಗ ನಮ್ಮ ಅಭಿಪ್ರಾಯಗಳನ್ನು ಮುಕ್ತವಾಗಿ ಹಂಚಿಕೊಂಡು ನಮ್ಮ ನೀತಿ-ನಿಯಮಗಳನ್ನು ನಾವೆ ರೂಪಿಸಿಕೊಳ್ಳಲು ಪಣ ತೊಡಲು ಮಕ್ಕಳನ್ನು ಸಿದ್ದಗೊಳಿಸೋಣ.



**– ಬಸವರಾಜ ಎಮ್.ಯರಗುಪ್ಪಿ.**
**ಬಿಆರ್‌ಪಿ, ಶಿರಹಟ್ಟಿ-ಲಕ್ಷ್ಮೇಶ್ವರ.**

### ಕಾರ್ ಪಲ್ಟಿ : ಮೂವರು ದುರ್ಮರಣ

■ ವಿಜಯಸಾಕ್ಷಿ ಸುದ್ದಿ, ವಿಜಯಪುರ

ಭೀಕರ ಕಾರು ಅಪಘಾತದಲ್ಲಿ ಮೂವರು ಸಾವನ್ನಪ್ಪಿದ ಘಟನೆ ತಾಲೂಕಿನ ಕನ್ನಾಳ ಕ್ರಾಸ್ ಬಳಿ NH-50 ರಲ್ಲಿ ಜರುಗಿದೆ.

ಚಾಲಕನ ನಿಯಂತ್ರಣ ತಪ್ಪಿ ಕಾರು ಪಲ್ಟಿಯಾಗಿ ಈ ಅವಘಡ ಸಂಭವಿಸಿದೆ.

### ಉತ್ತರ ಕರ್ನಾಟಕ ಛಾಯಾಗ್ರಾಹಕರಿಗಾಗಿ 'ಡಿಜಿ ಫೋಟೋ ಎಕ್ಸ್‌ಪೋ-2025'

# ಹಿರಿಯ ಛಾಯಾಗ್ರಾಹಕರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ ಫೋಟೋಗ್ರಾಫರ್ಸ್ ಮತ್ತು ವಿಡಿಯೋಗ್ರಾಫರ್ಸ್ ಅಸೋಸಿಯೇಶನ್ ಮತ್ತು ಕರ್ನಾಟಕ ವಿಡಿಯೋಗ್ರಾಫರ್ಸ್ ಮತ್ತು ಪೋಟೋಗ್ರಾಫರ್ಸ್ ಅಸೋಸಿಯೇಶನ್ ಜಂಟಿ ಸಹಯೋಗದೊಂದಿಗೆ ಬಾಯ್ & ಸೆಲ್ ಇಂಟರ್‍ಯಾಕ್ಷನ್ ಪ್ರೈವೆಟ ಲಿಮಿಟೆಡ್ ಇವರ ಸಹಭಾಗಿತ್ವದಲ್ಲಿ ಹುಬ್ಬಳ್ಳಿಯಲ್ಲಿ 7ನೇ ಬಾರಿ ರಾಷ್ಟ್ರಮಟ್ಟದ ಛಾಯಾಗ್ರಾಹಕರ ಛಾಯಾವಸ್ತು ಪ್ರದರ್ಶನ ಮತ್ತು 'ಡಿಜಿ ಫೋಟೋ ಎಕ್ಸ್‌ಪೋ'ವನ್ನು ಜನವರಿ 25 ಮತ್ತು 26ರಂದು ನಗರದ ಗೋಕುಲ ರೋಡ್‌ನಲ್ಲಿರುವ ವಾಸವಿ ಮಹಲ್ ಆವರಣದಲ್ಲಿ ಆಯೋಜಿಸಲಾಗಿದೆ.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಸಂಘದ ಪದಾಧಿಕಾರಿಗಳು, ಈ ಪ್ರದರ್ಶನದಲ್ಲಿ ಒಟ್ಟು ದೇಶದ ವಿವಿಧ ಪ್ರದೇಶಗಳಿಂದ ಬರುವ ವಿವಿಧ ಕಂಪನಿಗಳಿಂದ 70 ಮಳಿಗೆಗಳನ್ನು ಸ್ಥಾಪಿಸಲಾಗುತ್ತಿದೆ. ಇದರಲ್ಲಿ ವಿವಿಧ




ರೀತಿಯ ಕ್ಯಾಮರಾಗಳು, ಅತ್ಯುತ್ತಮ ಛಾಯಾಚಿತ್ರಗಳು ಪ್ರದರ್ಶಿತವಾಗಲಿದ್ದು ಛಾಯಾಚಿತ್ರಗ್ರಾಹಕರಿಗೆ ಹೊಸ ತಂತ್ರಜ್ಞಾನದ ಪರಿಚಯವನ್ನು ಮಾಡಿಕೊಡಲಾಗುತ್ತಿದೆಯಲ್ಲದೇ ಇದು ಅವರಿಗೆ ಒಂದು ವಿಶೇಷ ಸಂದರ್ಭವಾಗಿದೆ ಎಂದು ತಿಳಿಸಿದರು.

ಈ ಎರಡು ದಿನಗಳ ಅವಧಿಯಲ್ಲಿ ಉತ್ತರಕರ್ನಾಟಕದ ಛಾಯಾಗ್ರಾಹಕರಿಗಾಗಿ ಉಚಿತ ಕಣ್ಣಿನ ತಪಾಸಣೆಯನ್ನು ಐ ಬಡ್ಡಿ ಕಣ್ಣಿನ ಆಸ್ಪತ್ರೆ ಹಾಗೂ ಆರೋಗ್ಯ ಶಿಬಿರವನ್ನು ಸುಶ್ರುತಾ ಆಯುರ್ವೆದಿಕ್ ಆಸ್ಪತ್ರೆ, ಉನ್ನತಿ ಡೈಗ್ನೋಸ್ಟಿಕ್ ಸ್ಕ್ಯಾನ್ ಸೆಂಟರ್ ಇವರಿಂದ ಹಮ್ಮಿಕೊಳ್ಳಲಾಗಿದೆ.

ಫೆಬ್ರವರಿ 25ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಸರಕಾರದ ಕಾರ್ಮಿಕ ಸಚೀವರಾದ ಸಂತೋಷ ಲಾಡ್ ಹಾಗೂ ಹುಬ್ಬಳ್ಳಿ ವಿಧಾನಸಭಾ ಸದಸ್ಯರಾದ ಅರವಿಂದ ಬೆಲ್ಲದ ಅವರು ಛಾಯಾ ವಸ್ತುಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಇದರ ಅಧ್ಯಕ್ಷತೆಯನ್ನು ಹುಬ್ಬಳ್ಳಿ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಕಿರಣ ಬಾಕಳೆ ವಹಿಸಲಿದ್ದಾರೆ.

ನಂತರ ನಡೆಯುವ ಸಮಾರಂಭದಲ್ಲಿ ಉತ್ತರ ಕರ್ನಾಟಕದ ಹಿರಿಯ ಛಾಯಾಗ್ರಾಹಕರಾದ ನಾಗೇಂದ್ರಸಾ ಪೂಜಾರಿ, ಕೃಷ್ಣಾಸಾ ಪಟ್ಟಣ, ರವೀಂದ್ರ ಕಾಟೀಗರ, ಭರತ ದಲಬಂಜನ, ಕಿಶೋರ ಮಗಜಿ, ಪ್ರಭಾಕರ ಕಲಬುರ್ಗಿ, ಯಲ್ಲಪ್ಪ ಶಿಂಗ್ರಿ, ನಿಂಗಪ್ಪ ಉಗರಗೋಳ, ಅಶೋಕ ಬಡಿಗೇರ, ಉಮೇಶ ನಿಂಬಾಳಕರ, ಸಂತೋಷ ಖಿರೋಜಿ, ರವಿ ಕೋರ್ಪಡೆ, ರಾಜೇಶ ನಂದಿ, ಮಹಮ್ಮದಅಸ್ಲಂ ಖೋಜೆ, ಬಸವರಾಜ ಶೀಲವಂತ ಇವರಿಗೆ 'ಉತ್ತರ ಕರ್ನಾಟಕ ಛಾಯಾರತ್ನ' ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು.

ಈ ಪ್ರದರ್ಶನ ಮತ್ತು ಕಾರ್ಯಾಗಾರದ ಪ್ರಯೋಜನವನ್ನು ಉತ್ತರಕರ್ನಾಟಕದ ಎಲ್ಲ ಛಾಯಾಚಿತ್ರಗ್ರಾಹಕರು ಸದುಪಯೋಗ ಪಡಿಸಿಕೊಳ್ಳಬೇಕೆಂದು ಹುಬ್ಬಳ್ಳಿ ಫೋಟೋಗ್ರಾಫರ್ಸ್ ಮತ್ತು ವಿಡಿಯೋಗ್ರಾಫರ್ಸ್ ಅಸೋಸಿಯೇಶನ್ ಅಧ್ಯಕ್ಷ ಕಿರಣ ಬಾಕಳೆ ಮತ್ತು ಕರ್ನಾಟಕ ವಿಡಿಯೋಗ್ರಾಫರ್ಸ್ ಹಾಗೂ ಫೋಟೋಗ್ರಾಫರ್ಸ್ ಸಂಘದ ಅಧ್ಯಕ್ಷ ಬೆಂಜಮಿನ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ದಿನೇಶ ದಾಬಡೆ, ರವೀಂದ್ರ ಕಾಟೀಗರ, ಅನಿಲ ತುರುಮರಿ, ಕೃಷ್ಣಪ್ಪ ಹುಲಿಬೇಲೆ ಹಾಗೂ ಸಂಘದ ಸದಸ್ಯರು ಹಾಜರಿದ್ದರು.

# ಜನಮನ ರಂಜಿಸಿದ ಕರ್ನಾಟಕ ಕಲಾವೈಭವ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಹರ್ತಿ ಗ್ರಾಮದ ಕೆ.ಎಚ್. ಪಾಟೀಲ ರಂಗಮಂದಿರದಲ್ಲಿ ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಬೆಂಗಳೂರು ಇವರ ಸಹಯೋಗದಲ್ಲಿ ಕರ್ನಾಟಕ ಕಲಾವೈಭವ ಕಾರ್ಯಕ್ರಮ ಸಮಸ್ತ ಕಲಾಭಿಮಾನಿಗಳ ಮನ ರಂಜಿಸಿತು. ಕಾರ್ಯಕ್ರಮವನ್ನು ಹರ್ತಿ ಗ್ರಾ.ಪಂ ಅಧ್ಯಕ್ಷೆ ಹಾಲವ್ವ ಕುಬೇರಪ್ಪ ಕುರಿ ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಸೋಮರಡ್ಡಿ ನಡೂರ ಮಾತನಾಡಿ, ನಮ್ಮ ಗ್ರಾಮದಲ್ಲಿ ಇಂತಹ ಶಾಸ್ತ್ರೀಯ ಸಂಗೀತ, ನೃತ್ಯ ಹಾಗೂ ಜಾನಪದ ನೃತ್ಯ ಕಲಾವಿದರನ್ನು ಆಹ್ವಾನಿಸಿ ಕಾರ್ಯಕ್ರಮ ನೋಡಲು ಸದಾವಕಾಶ ಮಾಡಿಕೊಟ್ಟ ಇಲಾಖೆ ಮತ್ತು ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆಗೆ ಅಭನಂದನೆ ಸಲ್ಲಿಸಿದರು.

ಪ್ರಭು ಹುಡೇದ ಮಾತನಾಡಿ, ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಗಜಾನನ ವೆರ್ಣೇಕರ ನಮ್ಮೂರವರೇ ಆಗಿದ್ದು, ನಮ್ಮೂರಿನಲ್ಲಿ ಇಂತಹ ಅಭೂತಪೂರ್ವ ಕಾರ್ಯಕ್ರಮ ನಡೆಸಿರುವುದು ಹೆಮ್ಮೆಯ ವಿಚಾರವಾಗಿದೆ. ಇಂತಹ ಕಾರ್ಯಕ್ರಮಗಳು ಹೆಚ್ಚೆಚ್ಚು ಜರುಗಲಿ ಎಂದು ಅಭಿಪ್ರಾಯಪಟ್ಟರು.

ಗ್ರಾ.ಪಂ ಸದಸ್ಯ ಮಹೇಶ ಪಟ್ಟಣಶೆಟ್ಟಿ ಮಾತನಾಡಿ, ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆ ಹಾಗೂ ಶ್ರೀ ರಾಜೇಶ್ವರಿ ಕಲಾ ಕುಟೀರ ಸಂಸ್ಥೆಗಳನ್ನು ಯಶಸ್ವಿಯಾಗಿ 25 ವರ್ಷಗಳ ಕಾಲ ಮುನ್ನಡೆಸುತ್ತಿರುವುದು ಶ್ಲಾಘನೀಯ ಎಂದರು.

ಅತಿಥಿಗಳಾದ ಬಿ. ಟಿ. ಸೋಮರಡ್ಡಿ ಮಾತನಾಡಿದರು. ವೇದಿಕೆಯಲ್ಲಿ ಶಂಕ್ರಪ್ಪ ನವಲಿ, ಸಿದ್ದಪ್ಪ ಜೊಂಡಿ, ಸಿ.ವಿ. ಪಾಟೀಲ, ಶಂಕ್ರಪ್ಪ ಭಜಂತ್ರಿ, ಬಿ.ಬಿ. ಹೊನ್ನಪ್ಪನವರ ಸೇರಿದಂತೆ ಗ್ರಾಮದ ಹಿರಿಯರು, ಗ್ರಾ.ಪಂ ಸದಸ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿ.ಬಿ. ಸೋಮರಡ್ಡಿ ವಹಿಸಿದ್ದರು. ಗಜಾನನ ವೆರ್ಣೇಕರ ಸ್ವಾಗತಿಸಿದರು. ಪಲ್ಲವಿ ಹಿರೇಮಠ ನಿರೂಪಿಸಿದರು. ಬಸವೇಶ್ವರ ಗುರುಕುಲ ಶಾಲೆಯ ಶಿಕ್ಷಕಿಯರು ಕಾರ್ಯಕ್ರಮಕ್ಕೆ ಸಹಕಾರ ನೀಡಿದರು.

# ಮೂಲಭೂತ ಸೌಕರ್ಯ ಒದಗಿಸಲು ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿಯ 35 ವಾರ್ಡ್‌ಗಳಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ಗದಗ ತಾಲೂಕ ಘಟಕದ (ಟಿ.ಎ. ನಾರಾಯಣಗೌಡ್ರ ಬಣ) ಅಧ್ಯಕ್ಷರಾದ ಮುತ್ತಣ್ಣ ಚವಡಣ್ಣವರ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರವೇ ಗದಗ ಜಿಲ್ಲಾಧ್ಯಕ್ಷರಾದ ಹನಮಂತಪ್ಪ ಎಚ್.ಅಬ್ಬಿಗೇರಿ ಮಾತನಾಡಿ, ಇನ್ನೇನು ಬೇಸಿಗೆಯ ಕಾಲ ಬರುತ್ತಿದ್ದು, ಮುಂಜಾಗ್ರತಾ ಕ್ರಮವಾಗಿ ನೀರಿನ ವ್ಯವಸ್ಥೆ ಮಾಡಬೇಕು. ಇಲ್ಲವಾದಲ್ಲಿ ಬರುವ ದಿನಗಳಲ್ಲಿ ನೀರಿನ ಹಾಹಾಕಾರ ಉಂಟಾಗುವುದು ಖಚಿತ ಎಂದು ಆಂತಕ ವ್ಯಕ್ತಪಡಿಸಿದರು. ವಾರ್ಡ್‌ಗಳಲ್ಲಿ ಬೀದಿ ದೀಪ ಅಳವಡಿಕೆ, ಗಟಾರ ಸ್ವಚ್ಛತೆಗೆ ವ್ಯವಸ್ಥೆ ಮಾಡಬೇಕು. ವಾರ್ಡ್ ನಂ. 34ರ ಸಂಗೊಳ್ಳಿ ರಾಯಣ್ಣ ಉದ್ಯಾನವನವನ್ನು ಸಂಪೂರ್ಣ ಸ್ವಚ್ಛಗೊಳಿಸಬೇಕು ಮತ್ತು ಆ ಉದ್ಯಾನವನದಲ್ಲಿ ಸಂಗೊಳ್ಳಿ ರಾಯಣ್ಣನ ಪ್ರತಿಮೆಯನ್ನು ಸ್ಥಾಪಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ನಿಂಗನಗೌಡ ಮಾಲಿಪಾಟೀಲ, ನಜೀರಸಾಬ ಹದ್ಲಿ, ಮುಸ್ತಾಕ ಡಾವಣಗೇರಿ, ಯಲ್ಲಪ್ಪ ಭೋವಿ, ತೌಸಿಫ ಢಾಲಾಯತ, ಶಂಭು ಹಿರೇಮಠ, ನಾಗಪ್ಪ ಅಣ್ಣಿಗೇರಿ, ಅಕ್ಕಮಹಾದೇವಿ ದೊಡ್ಡಗೌಡರ, ಚಂದ್ರಶೇಖರ ಶ್ಯಾಗೋಟಿ, ಸಿರಾಜ ಹೊಸಮನಿ, ಶಿವಾನಂದ ಮಡಿವಾಳರ, ಅಕ್ಬರಸಾಬ ದೊಡ್ಡಮನಿ, ಆನಂದ ಹಂಡಿ, ಯಮನೂರಸಾಬ ನದಾಫ್, ಅಶೋಕ ಅಣ್ಣಿಗೇರಿ, ಗೌಸುಸಾಬ ಶಿರಹಟ್ಟಿ, ಹೇಮಂತ ಹಕಾಕಿ, ರಮೇಶ ಅಬ್ಬಿಗೇರಿ, ಇರ್ಫಾನ ತಾಳಿಕೋಟಿ, ಸುಲೇಮಾನ ಮುಂಜಲಾಪೂರ, ಸಲೀಂ ಬೋದ್ಲೆಖಾನ, ಹುಸೇನ ಕುಂಡಾಲಿ, ಮುಸ್ತಾಕ ಡಾವಣಗೇರಿ, ದಾವಲಸಾಬ ತಹಸೀಲ್ದಾರ, ವಿನಾಯಕ ಬದಿ, ಶಬ್ಬೀರ ಚೌತಾಯ, ಅಕ್ಬರ ದೊಡ್ಡಮನಿ, ಕುಮಾರ ರ್‍ಯಾವಣ್ಣವರ ಮುಂತಾದವರು ಉಪಸ್ಥಿತರಿದ್ದರು.

### ಮೈಕ್ರೋ ಫೈನಾನ್ಸ್ ಕಿರುಕುಳ ಆರೋಪ: ದೂರು ಕೊಟ್ಟರೆ ಕ್ರಮ ಕೈಗೊಳ್ಳುತ್ತೇವೆ: ಸತೀಶ್ ಜಾರಕಿಹೊಳಿ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಿರುಕುಳ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಹಾವೇರಿ, ಮೈಸೂರು, ಉಡುಪಿ, ಚಿಕ್ಕಮಗಳೂರು ಮುಂತಾದ ಜಿಲ್ಲೆಗಳಲ್ಲಿ ಸಾಲದ ಬಾಧೆಗೆ ಸಿಲುಕಿ ಅನೇಕರು ಊರು, ಮನೆ ಬಿಟ್ಟು ಹೋಗಿದ್ದಾರೆ. ಮತ್ತೆ ಕೆಲವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇನ್ನೂ ಈ ವಿಚಾರವಾಗಿ ಕುಟುಂಬಸ್ಥರು ದೂರು ಕೊಟ್ಟರೆ ಫೈನಾನ್ಸ್ ನವರ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಅವರು, ಸುಮಾರು ಕಡೆ ಕಿರುಕುಳ ಕೊಡುವ ವರದಿಗಳು ಬರ್ತಿವೆ. ತೊಂದರೆ ಕೊಟ್ಟರೆ ದೂರು ದಾಖಲು ಮಾಡುವಂತೆ ತಿಳಿಸಿದ್ದೇವೆ. ಫೈನಾನ್ಸ್ ಕಿರುಕುಳದ ಬಗ್ಗೆ ಗೊಂದಲ ಇದೆ. ಸಾಲ ಪಡೆಯೋದು, ಕಿರುಕುಳ ಕೋಡೊದು ಬೇರೆ ವಿಚಾರ. ಆದರೆ ಸಬ್ಸಿಡಿ ಹೆಸರಿನಲ್ಲಿ ಸಾವಿರಾರು ಜನರಿಗೆ ಸಾಲ ಕೊಟ್ಟಿದ್ದಾರೆ. ಹಣ ತುಂಬುವ ವಿಚಾರದಲ್ಲಿ ಈಗ ಸಂಘರ್ಷ ಆರಂಭವಾಗಿದೆ.

ಈಗಾಗಲೇ ಡಿಸಿ ನೇತೃತ್ವದಲ್ಲಿ ಒಂದು ಸಭೆ ನಡೆಸಿದ್ದೇನೆ. ಎರಡು ತಿಂಗಳ ಸಮಯ ಕೇಳಿದ್ದೇವೆ, ಏನಾದರೂ ಅದಕ್ಕೆ ಪರಿಹಾರ ಹುಡುಕುತ್ತೇವೆ. ಒಂದು ತಿಂಗಳಲ್ಲಿ ಏನು ಸಾಧ್ಯವೋ ಅದಕ್ಕೆ ಪರಿಹಾರಕ್ಕೆ ಮಾಡುತ್ತೇವೆ.

ಇನ್ನೂ ಶಿರೂರನಲ್ಲಿ ಕೂಡ ಮಹಿಳೆ ಆತ್ಮಹತ್ಯೆ ಪ್ರಕರಣ ನಡೆದಿದೆ, ದೂರು ದಾಖಲು ಮಾಡಲು ಹೇಳಿದ್ದೇನೆ. ಮಧ್ಯವರ್ತಿಗಳ ಜತೆಗೆ ಫೈನಾನ್ಸ್ ನವರು ಭಾಗಿದಾರರಾಗಿದ್ದಾರೆ ಎಂಬ ಆರೋಪವಿದೆ. ಮಧ್ಯವರ್ತಿಗಳಿಗೆ ಹಣ ಕೊಟ್ಟಿದ್ದಾರೆ, ಪೊಲೀಸ್ ತನಿಖೆಗೆ ಸೂಚನೆ ಕೊಟ್ಟಿದ್ದೇನೆ. ವರದಿ ಬಂದ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದರು.

ತಾರಿಹಾಳದಲ್ಲಿ ಒಂದು ತಿಂಗಳ ಬಾಣಂತಿ ಮನೆಯಿಂದ ಹೊರಹಾಕಿ ಮನೆ ಹರಾಜಿಗಿಟ್ಟ ಪ್ರಕರಣ ಸಂಬಂಧಿಸಿದಂತೆ ಕುಟುಂಬಸ್ಥರು ದೂರು ಕೊಟ್ಟರೆ, ಫೈನಾನ್ಸ್ ನವರ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

# ರಸ್ತೆ ಸುಧಾರಣೆ ಕುರಿತು ಸಂಸದರಿಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಾ ಕೇಂದ್ರಕ್ಕೆ ರಾಜ್ಯ ಹೆದ್ದಾರಿಯಿಂದ ಸಂಪರ್ಕ ಕಲ್ಪಿಸುವ ರಸ್ತೆಗಳ ನಿರ್ಮಾಣ ಕುರಿತಂತೆ ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರಿಗೆ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ ಹಾಗೂ ಸ್ಥಳೀಯ ಮುಖಂಡರು ಶುಕ್ರವಾರ ಭೇಟಿ ಮಾಡಿ ಹಾಳಾದ ರಸ್ತೆಯ ಸುಧಾರಣೆ ಕುರಿತು ಚರ್ಚೆ ನಡೆಸಿದರು.

ನಂತರ ಪತ್ರಿಕೆಯೊಂದಿಗೆ ಮಾತನಾಡಿದ ಜಿ.ಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಶಿರಹಟ್ಟಿ ತಾಲೂಕಾ ಕೇಂದ್ರಕ್ಕೆ ರಾಜ್ಯ ಹೆದ್ದಾರಿ ನಿರ್ಮಾಣದ ಸಂದರ್ಭದಲ್ಲಿ ಭಾರೀ ವಾಹನಗಳು ನಿತ್ಯವೂ ಸಂಚರಿಸಿದ್ದರಿಂದ ಸಂಪರ್ಕ ಕಲ್ಪಿಸುವ ರಸ್ತೆಗಳು ಹಾಳಾಗಿವೆ. ಇದನ್ನು ಕೆಲವು ಕಡೆಗಳಲ್ಲಿ ಕಾಟಾಚಾರ'ಕ್ಕೆಂಬಂತೆ ದುರಸ್ತಿ ಮಾಡಿ ತೇಪೆ ಹಚ್ಚಿದ್ದಾರೆ. ಇದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಇದನ್ನು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿ ರಸ್ತೆ ನಿರ್ಮಿಸಿಕೊಡಬೇಕೆಂದು ವಿನಂತಿಸಲಾಗಿದೆ. ಇದಕ್ಕೆ ಸಂಸದ ಬಸವರಾಜ ಬೊಮ್ಮಾಯಿ ಅವರು ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ವಹಿಸುವ ಭರವಸೆ ನೀಡಿದ್ದಾರೆ. ಕಡಕೋಳ ಗ್ರಾಮದಲ್ಲಿ ಜಲಜೀವನ್ ಮಿಶನ್ ಯೋಜನೆ ಅಡಿ ಕೈಗೊಂಡ ಕಾಮಗಾರಿ ಅಪೂರ್ಣಗೊಂಡಿದ್ದರ ಕುರಿತು ಸಹ ಗಮನಕ್ಕೆ ತರಲಾಗಿದೆ ಎಂದರು. ತಾ.ಪಂ ಮಾಜಿ ಸದಸ್ಯ ತಿಪ್ಪಣ್ಣ ಕೊಂಚಿಗೇರಿ, ಪ.ಪಂ ಸದಸ್ಯ ಸಂದೀಪ ಕಪ್ಪತ್ತನವರ, ಕಡಕೋಳದ ಶರಣಪ್ಪ ಹರ್ಲಾಪೂರ, ಸಂದೇಶ ಗಾಣಿಗೇರ, ಮುತ್ತಣ್ಣ ಕಪ್ಪತ್ತನವರ ಮುಂತಾದವರು ಉಪಸ್ಥಿತರಿದ್ದರು.

# ಬೆಂಕಿ ಅವಘಡ: ನಡು ರಸ್ತೆಯಲ್ಲೇ ಹೊತ್ತಿ ಉರಿದ ಟ್ರಕ್!



■ವಿಜಯಸಾಕ್ಷಿ ಸುದ್ದಿ, ರಾಯಚೂರು

ನಡುರಸ್ತೆಯಲ್ಲೇ ಬೆಂಕಿ ಹೊತ್ತಿ ಉರಿದ ಘಟನೆ ಜಿಲ್ಲೆಯ ಮಾನ್ವಿ ತಾಲೂಕಿನ ಕಪಗಲ್ ಬಳಿ ಜರುಗಿದೆ.

ಚಲಿಸುತ್ತಿದ್ದ ಟ್ರಕ್‌ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡು ಈ ಅವಘಡ ಸಂಭವಿಸಿದೆ. ಟ್ರಕ್ ಇಂಜಿನ್‌ನಲ್ಲಿ ಬಿಸಿ ಹೆಚ್ಚಾಗಿದ್ದು ಅತಿಯಾದ ಶಾಖದಿಂದ ಬೆಂಕಿ ಹೊತ್ತಿಕೊಂಡಿದೆ ಎನ್ನಲಾಗಿದೆ. ಬೆಂಕಿ ಕಾಣಿಸಿಕೊಂಡಿದ್ದೆ ತಡ ಟ್ರಕ್ ಬಿಟ್ಟು ಚಾಲಕ ಮತ್ತು ಕ್ಲೀನರ್ ಕೆಳಗಡೆ ಇಳಿದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಬೆಂಕಿಯ ಕೆನ್ನಾಲಿಗೆಗೆ ಟ್ರಕ್‌ನ ಮುಂಭಾಗ ಸುಟ್ಟು ಕರಕಲಾಗಿದೆ.

ಕೂಡಲೇ ಅಗ್ನಿಶಾಮಕ ದಳ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿದ್ದು, ಬೆಂಕಿ ನಂದಿಸಿದ್ದಾರೆ. ಹೀಗಾಗಿ ಟ್ರಕ್‌ನ ಇಂಜಿನ್ ಮುಂಭಾಗ ಮಾತ್ರ ಸುಟ್ಟು ಕರಕಲಾಗಿದೆ.

### ಕಣ್ಣೆದುರಿಗೇ ಹಾಳಾಗುತ್ತಿದೆ ಗಾಂಧಿ ಹೆಸರಿನ ಸಾಂಸ್ಕೃತಿಕ ಭವನ

# ಗಾಂಧಿ ಭವನಕ್ಕೆ ಅನಾಥ ಪ್ರಜ್ಞೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಊರು ಎಂದ ಮೇಲೆ ಅಲ್ಲಿ ತನ್ನದೇ ಆದ ಒಂದು ಸಾಂಸ್ಕೃತಿಕ ವಲಯ ಇದ್ದೇ ಇರುತ್ತದೆ. ಸಾಂಸ್ಕೃತಿಕ ವಲಯ ಇದ್ದ ಮೇಲೆ ಅಲ್ಲೊಂದು ಸಾಂಸ್ಕೃತಿಕ ಭವನ ಇದ್ದರೆ ಚೆಂದ ಎನ್ನುವ ದೃಷ್ಟಿಯಿಂದ ಮಾಜಿ ಸಂಸದ ಐ.ಜಿ. ಸನದಿಯವರು ನರೇಗಲ್ಲಿಗೊಂದು ಸಾಂಸ್ಕೃತಿಕ ಭವನ ಇರಲಿ ಎನ್ನುವ ಉದ್ದೇಶದಿಂದ ತಮ್ಮ ಅನುದಾನದಲ್ಲಿ ಗಾಂಧಿ ಭವನವನ್ನು ನಿರ್ಮಿಸಿದ್ದರು.

ಕೆಲವು ವರ್ಷಗಳವರೆಗೆ ಇಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು, ಸಾಮಾಜಿಕ ಕಾರ್ಯಕ್ರಮಗಳು ನಡೆದು ಜನರ ಮನಸ್ಸಿಗೆ ನೆಮ್ಮದಿ ನೀಡಿದ್ದವು. ಆ ಸಮಯದಲ್ಲಿಯೆ ಪಟ್ಟಣ ಪಂಚಾಯಿತಿಯಿಂದ ಕೂಗಳತೆಯ ದೂರದಲ್ಲಿರುವ ಈ ಭವನವನ್ನು ಗೋಡೆಗಳಿಂದ ರಕ್ಷಿಸಿ, ಬಾಗಿಲನ್ನು ಹಚ್ಚಿ ಇದನ್ನು ಕಾಯ್ದುಕೊಳ್ಳಿ ಎಂದು ಪಟ್ಟಣದ ಸಾಂಸ್ಕೃತಿಕ ಸಂಘಟನೆಗಳು, ಸಾಹಿತಿಗಳು ಪಟ್ಟಣ ಪಂಚಾಯಿತಿಗೆ ಗೋಗರೆದರು. ಆದರೆ ಇದಾವುದನ್ನೂ ಕಿವಿಗೆ ಹಾಕಿಕೊಳ್ಳದ ಹಿಂದಿನ ಆಡಳಿತ ಮಂಡಳಿಗಳು ಅದರ ಕಡೆಗೆ ಲಕ್ಷ್ಯ ಕೊಡದೆ ಹೋದುದರಿಂದ



ಗಾಂಧಿ ಭವನವೀಗ ಗಂಧೀ(ಹೊಲಸಿನ)ಭವನವಾಗಿದೆ. ಇಲ್ಲಿ ನಡೆಯಬಾರದ್ದು ನಡೆಯುತ್ತದೆ, ರೈತರು ಧಾನ್ಯಗಳನ್ನು ರಾಶಿ ಹಾಕುತ್ತಾರೆ. ತಮ್ಮ ವಾಹನಗಳ ಸುರಕ್ಷತೆಗಾಗಿ ಮಾಲೀಕರು ಇದನ್ನು ಪಾರ್ಕಿಂಗ್ ಸ್ಥಳವನ್ನಾಗಿ ಮಾಡಿಕೊಂಡಿದ್ದಾರೆ.

ನಿವೃತ್ತ ಸೈನಿಕ ಶಿವಪುತ್ರಪ್ಪ ಸಂಗನಾಳ ಹೇಳುವ ಪ್ರಕಾರ, ಗಾಂಧಿ ಭವನದ ನೆಲಹಾಸು ಕಿತ್ತು ಹೋಗಿದೆ. ವೇದಿಕೆಯ ಕಟ್ಟೆ ಒಡೆದಿದೆ, ಮೇಲಿನ ತಗಡುಗಳು ಹಾರಿ ಹೋಗಿವೆ, ಹಾಕಿರುವ ಕಬ್ಬಿಣದ ತೊಲೆಗಳೂ ತುಕ್ಕು ಹಿಡಿದಿವೆ. ಜನೇವರಿ 26ರ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಇಲ್ಲಿಯೇ ಮಾಡೋಣವೆಂದು ಈಗಿನ ಅಧ್ಯಕ್ಷರು, ಉಪಾಧ್ಯಕ್ಷರು, ಆಡಳಿತ ಮಂಡಳಿ, ಮುಖ್ಯಾಧಿಕಾರಿ, ಹಿಂದಿನ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರೂ ಏನೂ ಪ್ರಯೋಜನವಾಗದಿರುವುದು ನಮಗೆ ಅತೀವ ಬೇಸರವನ್ನುಂಟು ಮಾಡಿದೆ. ಗಾಂಧಿ ಹೆಸರಿನ ಈ ಸಾಂಸ್ಕೃತಿಕ ಭವನ ಕಣ್ಣೆದುರಿಗೇ ಹಾಳಾಗುತ್ತಿರುವುದು ಮನಸ್ಸಿಗೆ ಬಹಳಷ್ಟು ನೋವನ್ನುಂಟು ಮಾಡಿದೆ.

ಈಗಲಾದರೂ ಜಿಲ್ಲಾಧಿಕಾರಿಗಳು ಇಲ್ಲಿಗೆ ಆಗಮಿಸಿ, ಗಾಂಧಿ ಭವನದ ಸ್ಥಿತಿಯನ್ನು ಪರಿಶೀಲಿಸಿ, ಈಗಿನ ಆಡಳಿತ ಮಂಡಳಿಯವರಿಗೆ ಮತ್ತು ಮುಖ್ಯಾಧಿಕಾರಿಗೆ ಸಾಂಸ್ಕೃತಿಕ ಮನಸ್ಸುಗಳ ಸಭೆ ಕರೆದು ಇದರ ರಕ್ಷಣೆ ಹೇಗೆ ಎನ್ನುವ ಕುರಿತು ಪಾಠ ಮಾಡಿ ಇದನ್ನೊಂದು ವಿಶೇಷತೆಯುಳ್ಳ ಸಾಂಸ್ಕೃತಿಕ ಭವನವನ್ನಾಗಿಸಲಿ ಎಂದು ಸಂಗನಾಳ ಆಗ್ರಹಿಸಿದ್ದಾರೆ. ಇಲ್ಲವಾದರೆ ನಿವೃತ್ತ ಸೈನಿಕ ಸಂಘದವರು, ಸಾಂಸ್ಕೃತಿಕ ಮನಸ್ಸುಗಳೆಲ್ಲರೂ ಸೇರಿ ಪಟ್ಟಣ ಪಂಚಾಯಿತಿ ಎದುರಿಗೆ ಧರಣಿ ಹೂಡುವ ಎಚ್ಚರಿಕೆಯನ್ನೂ ಅವರು ನೀಡಿದ್ದಾರೆ.

# ಚಾಲನಾ ಸಿಬ್ಬಂದಿಗಳ ದಿನ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಚಾಲನಾ ಸಿಬ್ಬಂದಿಗಳ ದಿನದಂದು ವಾ.ಕ.ರ.ಸಾ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಅವರು ಹೊಸೂರು ಬಸ್ ನಿಲ್ದಾಣಕ್ಕೆ ಶುಕ್ರವಾರ ಭೇಟಿ ನೀಡಿ ಕರ್ತವ್ಯನಿರತ ಚಾಲನಾ ಸಿಬ್ಬಂದಿಗಳಿಗೆ ಹೂವು ಮತ್ತು ಸಿಹಿಯನ್ನು ಹಂಚಿ ಶುಭಾಶಗಳನ್ನು ತಿಳಿಸಿದರು.

ಕರ್ತವ್ಯನಿರತ ಚಾಲಕರನ್ನು ಉದ್ದೇಶಿಸಿ ಪ್ರಿಯಾಂಗಾ ಎಂ. ಅವರು ಮಾತನಾಡಿ, ಪ್ರತಿದಿನ ಸಾರಿಗೆ ಕಾರ್ಯಾಚರಣೆಯು ನಡೆಯುತ್ತಿರುತ್ತದೆ. ನಿರಂತರವಾಗಿ ಕೆಲಸ ನಡೆಯುವುದರ ಮೂಲಕ ವಿಶ್ರಾಂತಿ ರಹಿತ ಸೇವೆಯನ್ನು ಸಾರ್ವಜನಿಕರಿಗೆ ನಮ್ಮ ಚಾಲನಾ ಸಿಬ್ಬಂದಿಗಳು ಸೇವೆ ಸಲ್ಲಿಸುತ್ತಿದ್ದಾರೆಂದು ಹೇಳಿದರು.

ಈ ಸಂದರ್ಭದಲ್ಲಿ ಇಲಾಖಾ ಮುಖ್ಯಸ್ಥರಾದ ವಿವೇಕಾನಂದ ವಿಶ್ವಜ್ಞ, ಹುಬ್ಬಳ್ಳಿ ಗ್ರಾಮಾಂತರ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಎಚ್.ರಾಮನಗೌಡರ, ಉಪ ಮುಖ್ಯ ಸಂಚಾರ ವ್ಯವಸ್ಥಾಪಕರಾದ ಶಶೀಧರ ಕುಂಬಾರ, ವಿಭಾಗೀಯ ಸಂಚಾರ ಅಧಿಕಾರಿಗಳಾದ ಕೆ.ಎಲ್. ಗುಡೆನ್ನವರ, ಅಧಿಕಾರಿಗಳಾದ ರವಿ ಅಂಚಗಾವಿ, ನವೀನಕುಮಾರ ತಿಪ್ಪಾ ಸೇರಿದಂತೆ ಕರ್ತವ್ಯನಿರತ ಚಾಲನಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸರಕಾರಿ ಶಾಲೆಗಳು ಗುಣಮಟ್ಟದ ಶಿಕ್ಷಣದಲ್ಲಿ ಎಂದಿಗೂ ಮುಂದೆಯೇ ಇವೆ ಎಂದು ಸಂಜಯ ನೀಲಗುಂದ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಪ್ರಾಥಮಿಕ (ಡಿಪಿಇಪಿ)ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಪಾಲ್ಗೊಂಡು ಮಾತನಾಡಿ, ನಮ್ಮ ಮಾತೃಭಾಷೆ ಕನ್ನಡ. ಆ ಭಾಷೆಯನ್ನು ಉಳಿಸಿ ಬೆಳೆಸುವಲ್ಲಿ ಕನ್ನಡ ಶಾಲೆಗಳ ಪಾತ್ರ ಬಹು ಮುಖ್ಯವಾಗಿದ್ದು, ಆ ನಿಟ್ಟಿನಲ್ಲಿ ಸರಕಾರಿ ಶಾಲೆಗಳಲ್ಲಿ ಗುಣಮಟ್ಟದ



ಶಿಕ್ಷಣ ದೊರೆಯುತ್ತಿದೆ. ಪಾಲಕರ ಸಹಾಚಿು-ಸಹಕಾರ ತುಂಬಾ ಅಗತ್ಯವಾಗಿದೆ. ಮಕ್ಕಳು ಪಾಠದ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವ ಅಗತ್ಯವಿದೆ ಎಂದರು.

ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ ಕಾರ್ಯಕ್ರಮ ಉದ್ಘಾಟಿಸಿದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಮಾಹಾಂತೇಶ ಕೆಂಚನಾಯ್ಕರ್ ವಹಿಸಿದ್ದರು. ಪ.ಪಂ ಸದಸ್ಯ ಮಾಹಾಂತೇಶ ನೀಲಗುಂದ, ಮಹಾದೇವಪ್ಪಾ ಗಡಾದ, ಎ.ಎಚ್. ದುರ್ಗಿಗುಡಿ, ಎನ್.ಎಸ್. ಕರಿಗೂಳಪ್ಪನವರ, ಜೆ.ಜಿ. ಈರಗಾರ, ಹನುಮಂತಪ್ಪ ಹಗ್ಗದ, ಮಾಹಾಂತೇಶ ಬಳ್ಳಾರಿ, ಮಾಹಾದೇವಪ್ಪಾ ವಿಜಾಪೂರ, ಗಂಗಪ್ಪಾ ಸುಂಕಾಪೂರ, ಮಹೇಶ ನೀಲಗುಂದ ಮುಂತಾದವರಿದ್ದರು.

# ಮತದಾನಕ್ಕಿಂತ ಮಹತ್ವವಾದದ್ದು ಇನ್ನೊಂದಿಲ್ಲ



■ವಿಜಯಸಾಕ್ಷಿ ಸುದ್ದಿ, ಗದಗ

ಹೊಸ ಮತದಾರರನ್ನು ಸೆಳೆಯುವುದು, ಉತ್ತೇಜಿಸುವುದು ಹಾಗೂ ಮತದಾರರ ಸಂಖ್ಯೆಯನ್ನು ಹೆಚ್ಚಳ ಮಾಡುವ ನಿಟ್ಟಿನಲ್ಲಿ ಭಾರತದಾದ್ಯಂತ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತಿದೆ ಎಂದು ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಎ.ಕೆ. ಮಠ ತಿಳಿಸಿದರು.

ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮತದಾನದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಚುನಾವಣಾ ಪ್ರಕ್ರಿಯೆಗಳ ಬಗ್ಗೆ ಅರಿವು ಮೂಡಿಸುವ ಪ್ರಯತ್ನದ ಭಾಗವಾಗಿ ಪ್ರತಿ ವರ್ಷ ಭಾರತದಲ್ಲಿ ಜನವರಿ 25ರಂದು ಮತದಾರರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. 1950ರಲ್ಲಿ ಸ್ಥಾಪನೆಯಾದ ಭಾರತದ ಚುನಾವಣಾ ಆಯೋಗದ ಸಂಸ್ಥಾಪನ ದಿನದ ನೆನಪಿಗಾಗಿ ಇದೇ ದಿನದಂದು ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತದೆ. ಭಾರತದ ಚುನಾವಣಾ ಆಯೋಗವು ಒಂದು ಸಾಂವಿಧಾನಿಕ ಸಂಸ್ಥೆಯಾಗಿದ್ದು, ದೇಶದಲ್ಲಿ ಎಲ್ಲಾ ಹಂತಗಳಲ್ಲಿ ಮುಕ್ತ ಮತ್ತು ನ್ಯಾಯಯುತ ಚುನಾವಣೆಗಳನ್ನು ನಡೆಸುವ ಜವಾಬ್ದಾರಿಯನ್ನು ಹೊಂದಿದೆ. ಇಂತಹ ಸಂಸ್ಥೆಗೆ ಬೆಂಬಲವಾಗಿ ನಿಲ್ಲುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ. ಪ್ರತಿಯೊಬ್ಬರೂ ಕಡ್ಡಾಯವಾಗಿ ತಮ್ಮ ರಾಜಕೀಯ ಹಕ್ಕನ್ನು ಚಲಾಯಿಸಬೇಕೆಂದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಎಲ್ಲ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಅಂತಾರಾಷ್ಟ್ರೀಯ ವಿಜ್ಞಾನ ವಿಸ್ತೃತ ಕಾರ್ಯಕ್ರಮದಲ್ಲಿ ಹಿರಿಯ ವಿಜ್ಞಾನಿ ಪ್ರೊ. ಜಿ.ಯು. ಕುಲಕರ್ಣಿ ಅಭಿಪ್ರಾಯ

# ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿಜ್ಞಾನವಿಲ್ಲದ ಜಗತ್ತನ್ನು ಕಲ್ಪಿಸಿಕೊಳ್ಳುವುದೂ ಅಸಾಧ್ಯ. ದೇಶದ ಪ್ರಗತಿಯಲ್ಲಿ ವೈಜ್ಞಾನಿಕ ಸಂಶೋಧನೆ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಗ್ರಾಮೀಣ ಪ್ರದೇಶಗಲ್ಲಿನ ಮಕ್ಕಳಲ್ಲಿ ವೈಜ್ಞಾನಿಕ ಸಂಶೋಧನೆಗಳ ಅಧ್ಯಯನದ ಮನೋಭಾವ ಬೆಳೆಸುವುದು ಮುಖ್ಯವಾಗಿದೆ ಎಂದು ಜವಹಾರಲಾಲ್ ನೆಹರು ಉನ್ನತ ಸಂಶೋಧನೆ ಕೇಂದ್ರದ ಅಧ್ಯಕ್ಷ ಹಾಗೂ ಹಿರಿಯ ವಿಜ್ಞಾನಿ ಪ್ರೊ. ಜಿ.ಯು. ಕುಲಕರ್ಣಿ ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಸ್ಕೂಲ್ ಚಂದನದಲ್ಲಿ 2 ದಿನಗಳ ಕಾಲ ಭಾರತರತ್ನ ಪ್ರೊ. ಸಿ.ಎನ್.ಆರ್. ರಾವ್ ಎಜ್ಯುಕೇಶನ್ ಫೌಂಡೇಶನ್, ಜವಾಹರಲಾಲ್ ನೆಹರು ಉನ್ನತ ಸಂಶೋಧನಾ ಕೇಂದ್ರ ಹಾಗೂ ಸ್ಕೂಲ್ ಚಂದನ ಶಾಲೆಯ ಸಹಯೋಗದಲ್ಲಿ ನಡೆದ ಅಂತಾರಾಷ್ಟ್ರೀಯ ವಿಜ್ಞಾನ ವಿಸ್ತೃತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಜ್ಞಾನದ ಬಗ್ಗೆ ಮಕ್ಕಳಲ್ಲಷ್ಟೇ ಅಲ್ಲದೇ ಸಮಾಜದಲ್ಲಿ ಜಾಗೃತಿ ಮೂಡಿಸುವಂತಹ ಕಾರ್ಯವಾಗಬೇಕಾಗಿದೆ. ವಿಜ್ಞಾನ ಎಂದೆಂದಿಗೂ ಈ ಜಗತ್ತಿನಲ್ಲಿ ಶಾಶ್ವತವಾಗಿರುತ್ತದೆ. ಅದರ ಬಗ್ಗೆ ಮಕ್ಕಳಲ್ಲಿರುವ ಕುತೂಹಲವನ್ನು ಇಮ್ಮಡಿಗೊಳಿಸುವ



ಕಾರ್ಯವಾಗಬೇಕು. ಈ ಕಾರ್ಯವನ್ನು ಭಾರತರತ್ನ ಪ್ರೊ. ಸಿ.ಎನ್.ಆರ್. ರಾವ್ ಲಕ್ಷ್ಮೇಶ್ವರದ ಸ್ಕೂಲ್ ಚಂದನದಲ್ಲಿ ಮಾಡುತ್ತಿದ್ದಾರೆ. ಪರಿಣಾಮ ಚಂದನ ಸಂಸ್ಥೆಯ ವಿದ್ಯಾರ್ಥಿಗಳು ಬಾಲ ವಿಜ್ಞಾನಿಗಳಾಗಿ ಗಮನ ಸೆಳೆಯುತ್ತಿರುವುದು ಪ್ರಶಂಸನೀಯ ಎಂದರು.

ಚಂದನ ಶಾಲೆ ಸಂಸ್ಥಾಪಕ ಅಧ್ಯಕ್ಷ ಟಿ.ಈಶ್ವರ ಪ್ರಾಸ್ತಾವಿಕವಾಗಿ ಮಾತನಾಡಿ, ಭಾರತರತ್ನ ಪ್ರೊ. ಸಿ.ಎನ್.ಆರ್ ರಾವ್ ಅವರು ಗ್ರಾಮೀಣ ಪ್ರದೇಶದ ಮಕ್ಕಳು ಸಹ ವಿಜ್ಞಾನದಲ್ಲಿ ಸಾಧನೆ ಮಾಡಬೇಕೆಂದು 7 ವರ್ಷಗಳಿಂದ ಸ್ಕೂಲ್ ಚಂದನದಲ್ಲಿ ವಿಜ್ಞಾನ ವಿಸ್ತೃತ ಕಾರ್ಯಕ್ರಮ ಸಂಘಟಿಸಿ, ಅಂತಾರಾಷ್ಟ್ರೀಯ ಮಟ್ಟದ ವಿಜ್ಞಾನಿಗಳಿಂದ ವಿಜ್ಞಾನ ಪಾಠಗಳನ್ನು ನೀಡುತ್ತಿದ್ದಾರೆ. ಸಿಎನ್‌ಆರ್ ಅವರು ಚಂದನ ಶಾಲೆಯ ಬಗ್ಗೆ ಇರುವ ಕಾಳಜಿ ಮತ್ತು ಪ್ರೀತಿಯಿಂದ ಸಾಕಷ್ಟು ಸಹಾಯ ಮತ್ತು ಪ್ರೋತ್ಸಾಹ ನೀಡುತ್ತಿರುವುದು ಸ್ಮರಣೀಯ.

ಮಕ್ಕಳಲ್ಲಿ ಸಂಶೋಧನಾ ಮನೋಭಾವನೆ ಬೆಳೆಸಲು ಶಾಲೆಯಲ್ಲಿ ಪೂರಕ ವಾತಾವರಣ ನಿರ್ಮಿಸಲಾಗಿದೆ. ದೇಶದ ಅಭಿವೃದ್ಧಿ ಸಂಶೋಧನೆಯ ಮೇಲೆ ನಿಂತಿದ್ದು, ಬಾಲ ವಿಜ್ಞಾನಿಗಳಾಗಿ ಈ ಸಂಸ್ಥೆಯ ವಿದ್ಯಾರ್ಥಿಗಳು ದೇಶದ ಪ್ರತಿಷ್ಠಿತ ಸಂಶೋಧನಾ ಕೇಂದ್ರದಲ್ಲಿ ಭಾರತರತ್ನ ಸಿಎನ್‌ಆರ್ ಅವರ ಮಾರ್ಗದರ್ಶನದಲ್ಲಿ ತರಬೇತಿ ಪಡೆದಿರುವುದು ಹೆಮ್ಮೆಯಾಗಿದೆ ಎಂದರು.

ಡಾ. ಇಂದುಮತಿ ರಾವ್ ಅವರು ವರ್ಚುವಲ್ ಮೂಲಕ ಮಾತನಾಡಿ, ಲಕ್ಷ್ಮೇಶ್ವರ ನನಗೆ ತವರು ಮನೆ ಇದ್ದಂತೆ. ಚಂದನ ಶಾಲೆಯನ್ನು ನಮ್ಮ ಶಾಲೆಯಾಗಿ ಸ್ವೀಕರಿಸಿದ್ದೇವೆ. ಇಲ್ಲಿರುವ ಮಕ್ಕಳು ನಮ್ಮ ಮಕ್ಕಳಿದಂತೆ ಎಂದ ಅವರು, ಭಾರತದ ಶ್ರೇಷ್ಠ ವಿಜ್ಞಾನಿಗಳಾದ ಪ್ರೊ. ಸಿ.ಎನ್.ಆರ್ ರಾವ್ ಅವರು ನಮ್ಮ ಶಾಲೆಗೆ ಕೊಟ್ಟ ಅವಕಾಶಗಳನ್ನು ಬಳಸಿಕೊಂಡು ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಭವಿಷತ್ತಿನ ದೇಶದ ವಿಜ್ಞಾನಿಗಳಾಗಿ ಹೊರಹೊಮ್ಮಬೇಕು ಎಂದು ಸಲಹೆ ನೀಡಿದರು

ಕಾರ್ಯಕ್ರಮದಲ್ಲಿ ನಿರ್ದೇಶಕ ಎಚ್.ಸಿ. ರಟಗೇರಿ, ಖ್ಯಾತ ವಿಜ್ಞಾನಿಗಳಾದ ಎಸ್.ಎಂ. ಶಿವಪ್ರಸಾದ, ಎನ್.ಎಸ್. ವಿದ್ಯಾಧಿರಾಜ್, ಡಾ. ಜಗದೀಶ ಅಂಗಡಿ, ಡಾ. ಜಯಶ್ರೀ, ಡಾ. ಕುಶಾಗ್ರ ಬನ್ಸಾಲ್, ಡಾ. ಪ್ರತಾಪ ವೈಷ್ಣೋಯಿ, ಡಾ. ವಿನಾಯಕ ಪತ್ತಾರ, ರೇವಣಸಿದ್ದಪ್ಪ, ಪ್ರಾಚಾರ್ಯ ಆರ್.ಜಿ. ಭಾವಾನವರ, ವಿದ್ಯಾರ್ಥಿ ಸಂಸತ್ ಕ್ಯಾಪ್ಟನ್ ತನು ಹಾಜರಿದ್ದರು.

ವಿದ್ಯಾಥಿಗಳಾದ ವಚನಾ, ಶಿಲ್ಪಾ, ಪ್ರಿಯಾಂಕಾ ಮತ್ತು ಸುರೇಶ ನಿರೂಪಿಸಿದರು. ವಿವಿಧ ಶಾಲಾ ಕಾಲೇಜುಗಳಿಂದ ನೂರಾರು ವಿದ್ಯಾರ್ಥಿಗಳು, ವಿಜ್ಞಾನ ಶಿಕ್ಷಕರು ಪಾಲ್ಗೊಂಡಿದ್ದರು.

# ನಿಧನ



**ದಾವಲಸಾಬ ಅಮೀನಸಾಬ ಗಡಾದ**

**ಗದಗ:** ನಗರದ ಕಳಸಾಪೂರ ರಸ್ತೆಯ ಬಾಪುಜಿನಗರದ ನಿವಾಸಿ ದಾವಲಸಾಬ (ಇಬ್ರಾಹಿಮ) ಅಮೀನಸಾಬ ಗಡಾದ (44) ಗುರುವಾರ ನಿಧನರಾದರು. ಮೃತರು ಪತ್ನಿ, ಮಕ್ಕಳು ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

**ಸಂತಾಪ:** ದಾವಲಸಾಬ ಅಮೀನಸಾಬ ಗಡಾದ ನಿಧನಕ್ಕೆ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ, ಉಪಾಧ್ಯಕ್ಷ ರವಿಕುಮಾರ ಬೆಳಮಕರ, ರೈಹಮಾನಸಾಬ ಗಡಾದ, ಅಲ್ಲಾಸಾಬ ಗಡಾದ, ಅರಮಾನ ಗಡಾದ ಮುಂತಾದವರು ಸಂತಾಪ ಸೂಚಿಸಿದ್ದಾರೆ.



**ರಾಚಪ್ಪ ಬನ್ನಿಗೊಣ್ಣವರ**

ಗದಗ: ನಗರದ ಒಕ್ಕಲಗೇರಿ ಓಣಿ, ಕಮತರ ಪ್ಲಾಟ್, ಗಣಪತಿ ದೇವಸ್ಥಾನದ ಹತ್ತಿರದ ನಿವಾಸಿ ಶರಣ ರಾಚಪ್ಪ ಸಿದ್ಧಪ್ಪ ಬನ್ನಿಗೊಣ್ಣವರ (76) ಜ.24ರಂದು ಸಂಜೆ ನಿಧನರಾದರು.

ಮೃತರ ಅಂತ್ಯಕ್ರಿಯೆಯು ಜ. 25ರ ಮುಂಜಾನೆ 11 ಗಂಟೆಗೆ ಅವರ ಸ್ವಗೃಹದಿಂದ ಹೊರಡುವುದು. ಮೃತರು ಪತ್ನಿ, ಮಗಳು, ಇಬ್ಬರು ಗಂಡು ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

### ಜನವರಿ 25ರಿಂದ ಜನವರಿ 28ರವರೆಗೆ ಧಾರವಾಡ ಜಿಲ್ಲಾ ಪ್ರವಾಸ

# ಸಚಿವ ಸಂತೋಷ ಲಾಡ್ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಜನವರಿ 25ರಿಂದ ಜನವರಿ 28ರವರೆಗೆ ಧಾರವಾಡ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಜನವರಿ 25ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡ ಸುವರ್ಣ ಶಿಕ್ಷಣ-ಮೇಘಾ ಎಜ್ಯುಕೇಶನ್ ಎಕ್ಸ್‌ಪೋ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ 11.30ಕ್ಕೆ ಹುಬ್ಬಳ್ಳಿಯ ವಾಸವಿ ಕಲ್ಯಾಣ ಮಂಟಪದಲ್ಲಿ ಹುಬ್ಬಳ್ಳಿ-ಧಾರವಾಡ ಫೋಟೋಗ್ರಾಫರ್ ಮತ್ತು ವಿಡಿಯೋಗ್ರಾಫರ್ಸ್ ಅಸೋಸಿಯೇಷನ್‌ದಿಂದ ಆಯೋಜಿಸಿರುವ ಫೋಟೊ ಎಕ್ಸ್‌ಪೋ ಮೇಳವನ್ನು ಉದ್ಘಾಟಿಸುವರು.



ಮಧ್ಯಾಹ್ನ 1 ಗಂಟೆಗೆ ಜಿ.ಬಸನಕೊಪ್ಪ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯಿಂದ ರಸ್ತೆ ನಿರ್ಮಾಣ ಕಾಮಗಾರಿಗೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯಿಂದ ನೀರಸಾಗರ-ಡೊಂಬರಿಕೊಪ್ಪ ರಸ್ತೆ ನಿರ್ಮಾಣ ಕಾಮಗಾರಿ ಹಾಗೂ ಸಣ್ಣ ನೀರಾವರಿ ಇಲಾಖೆಯಿಂದ ಜಿ.ಬಸನಕೊಪ್ಪ ನೀರಸಾಗರ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಮಧ್ಯಾಹ್ನ 3 ಗಂಟೆಗೆ ಅಳ್ನಾವರದ ಸ್ಥಳೀಯ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವರು. ಸಂಜೆ 6.30 ಗಂಟೆಗೆ ಧಾರವಾಡ ನಗರದ ದೊಡ್ಡನಾಯಕನಕೊಪ್ಪದಲ್ಲಿ ಆಯೋಜಿಸಿರುವ ಬಾಲಗಂಗಾಧರ ಮಹಾ ಸ್ವಾಮೀಜಿಯವರ 81ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಜನವರಿ 26ರಂದು ಬೆಳಿಗ್ಗೆ 8.30ಕ್ಕೆ ಧಾರವಾಡ ನಗರದ ಆರ್.ಎನ್. ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ ಆಯೋಜಿಸಿರುವ ಗಣರಾಜ್ಯೋತ್ಸವ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 12 ಗಂಟೆಗೆ ಹುಬ್ಬಳ್ಳಿಯ ಕೋರ್ಟ್ ಸರ್ಕಲ್‌ನಲ್ಲಿರುವ ಸಾಯಿಮಂದಿರದಲ್ಲಿ ಶ್ರೀ ಸಾಯಿ ವೃದ್ಧಾಶ್ರಮ ನೀಲನಕ್ಷೆ ಅನಾವರಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1 ಗಂಟೆಗೆ ಹುಬ್ಬಳ್ಳಿ ತಾಲೂಕಿನ ವರೂರು ಕ್ಷೇತ್ರದಲ್ಲಿ ನಡೆಯುತ್ತಿರುವ ಮಹಾ ಮಸ್ತಕಾಭಿಷೇಕ ಮತ್ತು ಪಂಚ ಕಲ್ಯಾಣ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಜನವರಿ 27ರಂದು ಬೆಳಿಗ್ಗೆ 11 ಗಂಟೆಗೆ ಧಾರವಾಡ ಜಿ.ಪಂನಲ್ಲಿ ಜಿಲ್ಲಾಡಳಿತ ಆಯೋಜಿಸಿರುವ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಅವರು ಅಂದು ರಾತ್ರಿ ನವದೆಹಲಿಗೆ ಪ್ರಯಾಣ ಬೆಳೆಸುವರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜನವರಿ 28ರಂದು ಬೆಳಿಗ್ಗೆ 11 ಗಂಟೆಗೆ ಜಿ.ಪಂ ಸಭಾಂಗಣದಲ್ಲಿ 2024-25ನೇ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಮೂರನೇ ತ್ರೈಮಾಸಿಕ (ಕೆಡಿಪಿ) ಪ್ರಗತಿ ಪರಿಶೀಲನಾ ಸಭೆಯನ್ನು ಜರುಗಿಸುವರು. ಮಧ್ಯಾಹ್ನ 3 ಗಂಟೆಗೆ ಹುಬ್ಬಳ್ಳಿ ನವನಗರದ ಹೆಸ್ಕಾಂ ಮುಖ್ಯ ಕಚೇರಿಯಲ್ಲಿ ಕಲಘಟಗಿ ಕ್ಷೇತ್ರದ ವಿದ್ಯುತ್ ಸಮಸ್ಯೆಗಳ ಕುರಿತು ಹೆಸ್ಕಾಂ ಹಾಗೂ ಕೆಪಿಟಿಸಿಎಲ್ ಅಧಿಕಾರಿಗಳೊಂದಿಗೆ ಸಭೆ ಜರುಗಿಸುವರು.

## ತಂಬಾಕು ಉತ್ಪನ್ನ ಮಾರಾಟಗಾರರಿಗೆ ದಂಡ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಶುಕ್ರವಾರ ಪಾನ್ ಬೀಡಾ, ಕಿರಾಣಿ ಮತ್ತು ಬಾರ್‌ಗಳು ಸೇರಿ 15 ಅಂಗಡಿಗಳ ಮೇಲೆ ದಾಳಿ ಮಾಡಿ ತಂಬಾಕು ಉತ್ಪನ್ನ ವಶಪಡಿಸಿಕೊಂಡು ದಂಡ ವಿಧಿಸಿ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.

ಈ ವೇಳೆ ಆರೋಗ್ಯ ಇಲಾಖೆಯ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಫ್.ಬಿ. ಹೂಗಾರ ಮಾತನಾಡಿ, ತಂಬಾಕು ಉತ್ಪನ್ನ ಮಾರಾಟ ನಿಯಂತ್ರಣಕ್ಕಾಗಿ ಕಾನೂನಿನ ಚೌಕಟ್ಟಿನಲ್ಲಿ ನಿರ್ಬಂಧ ವಿಧಿಸಿದೆ. ಧೂಮಪಾನ ವ್ಯಸನಿಗಷ್ಟೇ ಅಲ್ಲದೇ ಆರೋಗ್ಯಕರ ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತದೆ. ಕಾನೂನಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿ ಮಾಡಿ ತಂಬಾಕು ಮಾರಾಟ ಮುಕ್ತ ಪ್ರದೇಶಗಳನ್ನಾಗಿ ಮಾಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಈ ವೇಳೆ ಬಿ.ಎಸ್. ಹಿರೇಮಠ, ಕೆ.ಎಂ. ಕುಲಕರ್ಣಿ, ಫಕ್ಕಿರೇಶ ಜಂತ್ಲಿ, ಎಎಸ್‌ಐ ದೊಡ್ಡಮನಿ, ಸಿಡಿಪಿಒ ಇಲಾಖೆಯ ನಂದಾ ನವಲೆ ಮುಂತಾದವರಿದ್ದರು.

**ಗಣರಾಜ್ಯೋತ್ಸವ ದಿನಾಚರಣೆ**

## ಜಿಲ್ಲಾ ಕ್ರೀಡಾಂಗಣದಲ್ಲಿ ಬ್ಲಾಕ್‌ವಾರು ಆಸನದ ವ್ಯವಸ್ಥೆ

■ವಿಜಯಸಾಕ್ಷಿ ಸುದ್ದಿ, ಗದಗ

ಜನವರಿ 26ರಂದುಜರುಗುವಗಣರಾಜ್ಯೋತ್ಸವದಿನಾಚರಣೆಯನ್ನು ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗುತ್ತಿದೆ. ಸದರಿ ದಿನದಂದು ಧ್ವಜಾರೋಹಣವನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ರಚನೆ ಹಾಗೂ ಪ್ರವಾಸೋದ್ಯಮ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನೇರವೇರಿಸಲಿದ್ದಾರೆ. ಗಣರಾಜ್ಯೋತ್ಸವ ದಿನಾಚರಣೆಯಲ್ಲಿ ಗದಗ–ಬೆಟಗೇರಿ ನಗರದ ವ್ಯಾಪ್ತಿಯಲ್ಲಿ ಬರುವ ಎಲ್ಲ ಪ್ರಾಥಮಿಕ, ಪ್ರೌಢ, ಪದವಿಪೂರ್ವ, ಪದವಿ, ಬಿ.ಇಡಿ., ನರ್ಸಿಂಗ್, ಇಂಜಿನಿಯರಿಂಗ್, ವೈದ್ಯಕೀಯ ಕಾಲೇಜುಗಳ ವಿದ್ಯಾರ್ಥಿಗಳು, ಎನ್.ಸಿ.ಸಿ., ಎನ್.ಎಸ್.ಎಸ್, ಸ್ಕೌಟ್ & ಗೈಡ್ಸ್ ಹಾಗೂ ಇತರೆ ವಿದ್ಯಾರ್ಥಿಗಳು ಭಾಗವಹಿಸಲು ತಿಳಿಸಲಾಗಿದೆ.ಕೆ.ಎಚ್.ಪಾಟೀಲಜಿಲ್ಲಾಕ್ರೀಡಾಂಗಣದಲ್ಲಿಕುಳಿತುಕೊಳ್ಳಲು ಬ್ಲಾಕ್‌ವಾರು ಆಸನದ ವ್ಯವಸ್ಥೆಯನ್ನು ಮಾಡಲಾಗಿದೆ. ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಈ ಕೆಳಕಂಡಂತೆ ಪ್ರವೇಶಿಸಿ ತಮ್ಮ ತಮ್ಮ ಆಸನದಲ್ಲಿ ಶಾಂತ ರೀತಿಯಲ್ಲಿ ಕುಳಿತುಕೊಂಡು ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಬೇಕೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎ ಬ್ಲಾಕ್– ಸನ್ಮಾನಿತರು, ಅಧಿಕಾರಿಗಳು ಮತ್ತು ಸಿಬ್ಬಂದಿವರ್ಗ, ಬಿ.ಇಡಿ ವಿದ್ಯಾರ್ಥಿಗಳು, ನರ್ಸಿಂಗ್ ವಿದ್ಯಾರ್ಥಿಗಳು, ಪಾಲಿಟೆಕ್ನಿಕ್ ಮತ್ತು ವೈದ್ಯಕೀಯ ವಿದ್ಯಾರ್ಥಿಗಳು, ಬಿ ಬ್ಲಾಕ್– ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳು, ಎನ್.ಸಿ.ಸಿ. ಹಾಗೂ ಎನ್.ಎಸ್.ಎಸ್. ವಿದ್ಯಾರ್ಥಿಗಳು; ಸಿ ಬ್ಲಾಕ್– ಪದವಿ ಕಾಲೇಜು ಮತ್ತು ಎನ್.ಸಿ.ಸಿ. ಹಾಗೂ ಎನ್.ಎಸ್.ಎಸ್. , ಸ್ಕೌಟ್ಸ್ & ಗೈಡ್ಸ್ ಮತ್ತು ಸೇವಾದಳ ಹಾಗೂ ಇಂಜಿನಿಯರಿಂಗ್ ವಿದ್ಯಾರ್ಥಿಗಳು; ಡಿ ಬ್ಲಾಕ್– ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳು; ಇ ಬ್ಲಾಕ್– ಪ್ರೌಢಶಾಲಾ ವಿದ್ಯಾರ್ಥಿಗಳು; ಎಫ್ ಬ್ಲಾಕ್– ಪ್ರೌಢಶಾಲಾ ವಿದ್ಯಾರ್ಥಿಗಳು; ಜಿ ಬ್ಲಾಕ್– ಪ್ರೌಢಶಾಲಾ ವಿದ್ಯಾರ್ಥಿಗಳು; ಎಚ್ ಬ್ಲಾಕ್–ಪ್ರೌಢಶಾಲಾ ವಿದ್ಯಾರ್ಥಿಗಳು.

ಪ್ರವೇಶ ದ್ವಾರ–01 (ಕೆ.ಎಚ್. ಪಾಟೀಲ ಮುಖ್ಯದ್ವಾರ)– ಕೆ.ಎಚ್. ಪಾಟೀಲ ಮುಖ್ಯ ದ್ವಾರದಲ್ಲಿ ಸನ್ಮಾನಿತರು, ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ, ಬಿ.ಇಡಿ, ನರ್ಸಿಂಗ್, ಪಾಲಿಟೆಕ್ನಿಕ್ ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಆಗಮಿಸುವುದು. ಪ್ರವೇಶ ದ್ವಾರ–02 (ಕೆ.ಎಚ್. ಪಾಟೀಲ ಈಜುಕೊಳದ್ವಾರ)–ಬಿ.ಸಿ.ಡಿಮತ್ತುಇಬ್ಲಾಕ್‌ನಲ್ಲಿಬರುವಪದವಿಪೂರ್ವ, ಎನ್.ಸಿ.ಸಿ. ಹಾಗೂ ಎನ್.ಎಸ್.ಎಸ್. ಸ್ಕೌಟ್ಸ್ & ಗೈಡ್ಸ್ ಮತ್ತು ಸೇವಾದಳ ಹಾಗೂ ಇಂಜಿನಿಯರಿಂಗ್ ಪ್ರಾಥಮಿಕ ಹಾಗೂ ಪ್ರೌಢಶಾಲೆ ವಿದ್ಯಾರ್ಥಿಗಳು ಆಗಮಿಸುವುದು. ಪ್ರವೇಶ ದ್ವಾರ–03 (ಹುಲಕೋಟಿ ಶಿಕ್ಷಣ ಸಂಸ್ಥೆ ಹತ್ತಿರದ ದ್ವಾರ) ಪ್ರೌಢಶಾಲೆ ವಿದ್ಯಾರ್ಥಿಗಳು ಆಗಮಿಸುವುದು.

**ಗದಗ–ಬೆಟಗೇರಿಯ ಲೋಯೊಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಇಂದು**

# ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯತ್ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಜ.25ರಂದು ಬೆಳಿಗ್ಗೆ 10 ಗಂಟೆಗೆ ಗದಗ–ಬೆಟಗೇರಿಯ ಲೋಯೊಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ವಿ.ಪ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ



ಶಾಸಕ ಜಿ.ಎಸ್. ಪಾಟೀಲ, ಸಂಸದ ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾದ ಜಯಶ್ರೀ ಶಿಂತ್ರಿ ಆಗಮಿಸುವರು.

ಅತಿಥಿಗಳಾಗಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ರವಿ ಗುಂಜೀಕರ್, ಶಿಕ್ಷಣಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಜಿ.ಎಲ್. ಬಾರಾಟಕ್ಕೆ, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಬಿ.ಎಫ್. ಪೂಜಾರ, ಕ.ರಾ.ಪ್ರಾ.ಶಾ.ಶಿ ಸಂಘದ ಜಿಲ್ಲಾಧ್ಯಕ್ಷ ವಿ.ಎಂ. ಹಿರೇಮಠ, ಕ.ಮಾ.ಶಾ. ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ.ಕೆ. ಲಮಾಣಿ, ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ವಿಜಯ ಕಿರೇಸೂರ, ಕ.ರಾ.ಸ.ಬ.ಪ್ರೌ.ಶಾ.ಶಿ.ಕ್ಷೇ. ಸಂಘದ ಅಧ್ಯಕ್ಷ ಶಿವಾನಂದ ಗಿಡ್ನಂದಿ, ಪ್ರೌಢಶಾಲಾ ವೃತ್ತಿ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಕೆ. ನಿಂಬನಗೌಡ್ರ, ಕ.ರಾ ಎಸ್.ಸಿ/ಎಸ್‌ಟಿ ಪ್ರಾ.ಮಾ. ಶಾ.ಶಿ.ಕ್ಷೇ ಸಂಘದ ಜಿಲ್ಲಾಧ್ಯಕ್ಷ ವಸಂತ ಕಲಕಂಬಿ, ಕ.ರಾ.ಅ.ಪ್ರಾ.ಶಾ.ಶಿ. ಸಂಘದ ಜಿಲ್ಲಾಧ್ಯಕ್ಷ ರವಿ ಕೋಟಿಯವರ, ವಿಕಲಚೇತನ ಶಿಕ್ಷಕರ ಸಂಘದ ಅಧ್ಯಕ್ಷ ಆರ್.ಎಂ. ಶಿರಹಟ್ಟಿ, ಜಿ.ಪಿ.ಟಿ. ಸಂಘದ ಜಿಲ್ಲಾಧ್ಯಕ್ಷ ಹಾಲನಗೌಡ ಪಾಟೀಲ, ಪ್ರೌ.ಶಾ. ದೈ.ಶಿ.ಶಿಕ್ಷಕರ ಸಂಘ ಗ್ರೇ–1 ಜಿಲ್ಲಾಧ್ಯಕ್ಷ ಎಂ.ಎಸ್. ಕುಚಬಾಳ, ದೈಹಿಕ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರಾಜು ಚೌವ್ಹಾಣ ಆಗಮಿಸುವರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಡಯಟ್ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ, ಜಿ.ಪಂ ಪಿ.ಎಂ. ಪೋಷಣ ಶಕ್ತಿ ನಿರ್ಮಾಣ ಶಿಕ್ಷಣಾಧಿಕಾರಿ ಸರಸ್ವತಿ ಕನವಳ್ಳಿ, ಡಿ.ವೈ.ಪಿ.ಸಿ. ಹಾಗೂ ಪ್ರತಿಭಾ ಕಾರಂಜಿ ನೋಡಲ್ ಅಧಿಕಾರಿ ಎಂ.ಎಚ್. ಕಂಬಳಿ, ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಗದಗ ಶಹರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ್, ನರಗುಂದ ಕ್ಷೇತ್ರ ಶಿಕ್ಷಣಾಧಿಕಾರಿ ಡಾ. ಗುರುನಾಥ ಹೂಗಾರ, ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎನ್. ಹುರಳಿ, ಮುಂಡರಗಿ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಂ. ಫಡ್ನೀಶಿ, ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ನಾಣಕಿ ನಾಯ್ಕ ಅವರುಗಳು ಸರ್ವರಿಗೂ ಸ್ವಾಗತ ಕೋರಿದ್ದಾರೆ.

### ಸ್ಪರ್ಧೆಗಳ ವಿವರ

5ರಿಂದ 7ನೇ ತರಗತಿಯವರೆಗೆ

**ವೈಯಕ್ತಿಕ:** ಕಂಠಪಾಠ, ಧಾರ್ಮಿಕ ಪಠಣ, ದೇಶಭಕ್ತಿ ಗೀತೆ, ಕಥೆ ಹೇಳುವುದು, ಪ್ರಬಂಧ, ಚಿತ್ರಕಲೆ, ಅಭಿನಯ ಗೀತೆ, ಕ್ಲೇ ಮಾಡೆಲಿಂಗ್, ಭಕ್ತಿ ಗೀತೆ, ಆಶು ಭಾಷಣ, ಕವನ ವಾಚನ, ಮಿಮಿಕ್ರಿ.

**8ರಿಂದ 12ನೇ ತರಗತಿಯವರೆಗೆ**

**ವೈಯಕ್ತಿಕ:** ಭಾಷಣ, ಧಾರ್ಮಿಕ ಪಠಣ, ಜಾನಪದ ಗೀತೆ, ಭಾವಗೀತೆ, ಭರತನಾಟ್ಯ, ಚಿತ್ರಕಲೆ, ಮಿಮಿಕ್ರಿ, ಚರ್ಚಾಸ್ಪರ್ಧೆ, ರಂಗೋಲಿ, ಗಝಲ್, ಆಶು ಭಾಷಣ, ಕವನ ವಾಚನ, ಪ್ರಬಂಧ

**ಸಾಮೂಹಿಕ ವಿಭಾಗ:** ಜಾನಪದ ನೃತ್ಯ, ಕ್ವಿಜ್, ಕವಾಲಿ.

# ಸಂವಿಧಾನದ ಅಂಶಗಳನ್ನು ಶಾಲಾ ಹಂತದಲ್ಲಿಯೇ ತಿಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂವಿಧಾನವು ಒಂದು ಪುಸ್ತಕವಲ್ಲ. ಅದು ಭಾರತವನ್ನು ಮುನ್ನಡೆಸುವ ಒಂದು ಚೈತನ್ಯಶಕ್ತಿ. ಸಂವಿಧಾನದ ಮಹತ್ವ ಅರಿಯಬೇಕಾದದ್ದು ಪ್ರತಿಯೊಬ್ಬರ ಜವಾಬ್ದಾರಿ ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಧರ್ಮರ ಕೃಷ್ಣಪ್ಪ ಅಭಿಪ್ರಾಯಪಟ್ಟರು.

ಅವರು 76ನೇ ಗಣರಾಜ್ಯೋತ್ಸವದ ಪ್ರಯುಕ್ತ ತಾಲೂಕಾಡಳಿತ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯಗಳ ಸಹಯೋಗದಲ್ಲಿ ಲಕ್ಷ್ಮೇಶ್ವರ ಉತ್ತರ ಸಿ.ಆರ್.ಸಿ ಕೇಂದ್ರದಲ್ಲಿ ಭಾರತದ ಸಂವಿಧಾನ ವಿಷಯದ ಕುರಿತು ಹಮ್ಮಿಕೊಂಡ ರಸಪ್ರಶ್ನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.

ಮಕ್ಕಳೇ ಭವಿಷ್ಯದ ಪ್ರಜೆಗಳಾಗಿದ್ದು, ಪ್ರತಿಯೊಬ್ಬರ ಬದುಕಿಗೆ ಮೂಲಾಧಾರವಾದ ಸಂವಿಧಾನದ ಅಂಶಗಳನ್ನು ಶಾಲಾ ಹಂತದಲ್ಲಿಯೇ ತಿಳಿಸಿಕೊಡುವುದು ಅಗತ್ಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಡಿ.ಎನ್. ದೊಡ್ಡಮನಿ ಮಾತನಾಡಿ, ರಸಪ್ರಶ್ನೆ ಸ್ಪರ್ಧಾ ಕಾರ್ಯಕ್ರಮ ವಿದ್ಯಾರ್ಥಿಗಳ ಬುದ್ಧಿವಂತಿಕೆಗೆ ಸಾಣೆ ಹಿಡಿದಂತೆ ಎಂದರು. ಮಾಧ್ಯಮಿಕ ನೌಕರ



ಸಂಘದ ತಾಲೂಕಾಧ್ಯಕ್ಷ ಎಲ್. ಎಸ್. ಅರಳಿಹಳ್ಳಿ, ಪ್ರೌಢಶಾಲಾ ಸಹಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಎಸ್.ಡಿ. ಲಮಾಣಿ ಮಾತನಾಡಿದರು.

ಪ್ರೌಢಶಾಲಾ ವಿಭಾಗದ ಬಿ.ಆರ್.ಪಿ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕ ನುಡಿದರು. ಸರಕಾರಿ ಪ್ರೌಢಶಾಲೆ ಮಾಡಳ್ಳಿಯ ಶಿಕ್ಷಕ ಅಕ್ಬರಸಾಬ ನದಾಫ್ ರಸಪ್ರಶ್ನೆ ಸ್ಪರ್ಧೆಯ ನಿರ್ವಹಣೆ ಮಾಡಿದರು. ಸಿ.ಆರ್.ಪಿಗಳಾದ ಉಮೇಶ ನೇಕಾರ, ಸತೀಶ ಬೋಮಲೆ, ಎನ್.ಎ. ಮುಲ್ಲಾ, ಶಿಕ್ಷಕರಾದ ಎಸ್.ಬಿ. ಹೂವಿನ, ವೀರೇಶ ಕಮ್ಮಾರ, ಸಿ.ಎಫ್. ಪಾಟೀಲ, ಎನ್.ಎಸ್. ಬೀರನೂರ, ಆರ್.ಬಿ. ಅಡರಕಟ್ಟಿ ಇದ್ದರು.

ಪಟ್ಟಣ ವ್ಯಾಪ್ತಿಯ 14 ಪ್ರೌಢಶಾಲೆಗಳ ಇಬ್ಬರು ವಿದ್ಯಾರ್ಥಿಗಳ ತಂಡಗಳು ಭಾಗವಹಿಸಿದ್ದವು. ಎಸ್.ಟಿ.ಪಿ.ಎಂ.ಬಿ ಆಂಗ್ಲಮಾಧ್ಯಮ ಶಾಲೆಯ ಅರ್ಪಿತಾ ಚವಣ್ಣವರ, ಭುವನೇಶ್ವರಿ ಹೆಬ್ಬಾಳ ತಂಡ (ಪ್ರಥಮ), ದಿ ಯುನಿಕ್ ಸ್ಕೂಲ್‌ನ ಚಂದನಾ ಎನ್.ಕಳಸಾಪುರ, ವಿನುತಾ ವಿ.ಘೋರ್ಪಡೆ ತಂಡ (ದ್ವಿತೀಯ) ಆಕ್ಸ್‌ಫರ್ಡ್ ಸ್ಕೂಲ್‌ನ ಸಿಂಚನಾ ಕಟ್ಟೆಣ್ಣವರ, ಆಕಾಂಕ್ಷಾ ಪಾಟೀಲ (ತೃತೀಯ) ಸ್ಥಾನ ಪಡೆದರು. ಈ ವಿದ್ಯಾರ್ಥಿಗಳಿಗೆ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಲಾಗುವುದು.

# ಜಿಲ್ಲಾ ಕಾಂಗ್ರೆಸ್‌ನಿಂದ 76ನೇ ಗಣರಾಜ್ಯೋತ್ಸವ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಜನವರಿ 26ರಂದು ಬೆಳಿಗ್ಗೆ 8.30 ಗಂಟೆಗೆ 76ನೇ ಗಣರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಧ್ವಜಾರೋಹಣವನ್ನು ಗದಗ ಜಿಲ್ಲಾ ಕಾಂಗ್ರೆಸ್ ಕಮಿಟಿಯ ಅಧ್ಯಕ್ಷರೂ ಆಗಿರುವ ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ನೆರವೇರಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪಕ್ಷದ ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಆಗಮಿಸುವರು.

ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ, ಗ್ರಾಮ ಪಂಚಾಯತ, ಎಪಿಎಂಸಿ ಪಕ್ಷದ ಅಧ್ಯಕ್ಷರು–ಸದಸ್ಯರು, ನಗರಸಭೆ, ಪಟ್ಟಣ ಪಂಚಾಯತ, ಪುರಸಭೆ ಅಧ್ಯಕ್ಷರು–ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರೀಫಾರ್ಮ್ಸ್ ವಿಭಾಗ, ಐ.ಟಿ, ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗ, ಅಧ್ಯಕ್ಷರು–ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಜಿಲ್ಲಾ ಕಾಂಗ್ರೆಸ್ ಕಮಿಟಿಯ ಪ್ರಧಾನ ಕಾರ್ಯದರ್ಶಿ ವಿ.ವಿ. ಸೋಮನಕಟ್ಟಿಮಠ, ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.


## ಗ್ರಾಮ ಪಂಚಾಯತ ಕಾರ್ಯಾಲಯ ಅಡರಕಟ್ಟಿ

ತಾಲೂಕ: ಲಕ್ಷ್ಮೇಶ್ವರ ಜಿಲ್ಲಾ: ಗದಗ

ಸಂ.ಗ್ರಾ.ಪ.ಅ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ: 24.01.2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಅಡರಕಟ್ಟಿ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 1 | ಹರದಗಟ್ಟಿ ಗ್ರಾಮದ ಬೆಂದ್ರೆಕೆರೆಯಲ್ಲಿರುವ ರಸ್ತೆಯಲ್ಲಿ ಸಿ.ಡಿ ನಿರ್ಮಾಣ | 70177.34 |
| 2 | ಹರದಗಟ್ಟಿ ಗ್ರಾಮದ ಬೆಂದ್ರೆಕೆರೆಯಲ್ಲಿರುವ ಸ್ಮಶಾನಕ್ಕೆ ರಸ್ತೆ ನಿರ್ಮಾಣ | 74558.65 |
| 3 | ಅಡರಕಟ್ಟಿ ಗ್ರಾಮದ ಬಸಪ್ಪ ಅಗಸರ ಇವರ ಮನೆಯಿಂದ ಮಲ್ಲವ್ವ ಡಂಬಳ ಇವರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 296580.34 |
| 4 | ಅಡರಕಟ್ಟಿ ಗ್ರಾಮದ ಜಗನ್ನಾಥಪ್ಪ ಮುಳಗುಂದ ಇವರ ಹೊಲದಿಂದ ನಿಂಗಪ್ಪ ಅಬನೂರ ಇವರ ಹೊಲದವರೆಗೆ ರೈತ ಸಂಪರ್ಕ ರಸ್ತೆ ನಿರ್ಮಾಣ | 153377.08 |
| 5 | ಅಡರಕಟ್ಟಿ ತಾಂಡಾದಲ್ಲಿ ಗೋಡೌನ ನಿರ್ಮಾಣ | 1613319.41 |
| 6 | ಅಡರಕಟ್ಟಿ ಗ್ರಾಮದ ಪಂಚಾಯತ ಕಟ್ಟಡ್ಡದ ಹತ್ತಿರ ಮಳೆ ನೀರು ಕೊಯ್ಲು ನಿರ್ಮಾಣ | 136250.05 |
| 7 | ಕೊಂಡಿಕೊಪ್ಪ ಗ್ರಾಮದ ಕಲಬೆಂಚಿ ಕೆರೆ ಹತ್ತಿರ ಇರುವ ಬೋರವೆಲ್ ರಿಚಾರ್ಜ್ | 48931.46 |
| 8 | ಅಡರಕಟ್ಟಿ ಗ್ರಾಮದ ಜವಳ ಕೆರೆ ಉತ್ತರ ಭಾಗದಲ್ಲಿ ಹೂಳೆತ್ತುವುದು ಮತ್ತು ಕಲ್ಲು ಪಿಚ್ಚಿಂಗ ಅಳವಡಿಸುವುದು | 453503.67 |
| 9 | ಅಡರಕಟ್ಟಿ ಗ್ರಾಮದ ಗಂಗನಗೌಡ ಶಿ ಪಾಟೀಲ ಇವರ ಹೊಲದ ಹತ್ತಿರ ಬಾಂದಾರ ಹೂಳೆತ್ತುವುದು | 46000 |
| 10 | ಅಡರಕಟ್ಟಿ ಗ್ರಾಮದ ಜಗನ್ನಾಥಪ್ಪ ಮುಳಗುಂದ ಇವರ ಹೊಲದಿಂದ ದಬೆದಬೆ ಗುಂಡಿ ಹತ್ತಿರ ಬಾಂದಾರ ಹೂಳೆತ್ತುವುದು | 46000 |
| 11 | ಗ್ರಾಮದ ಸಂಜಯ ಬಿಜಾಪುರ ಇವರ ಹೊಲದ ಹತ್ತಿರ ಬಾಂದಾರ ಹೂಳೆತ್ತುವುದು | 46000 |

**ನಿಬಂಧನೆಗಳು**

**ಷರಾ : ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು ಹಾಗೂ ಪ್ರತಿ ಕಾಮಗಾರಿಯ ಖಾಲಿ ಟೆಂಡರ್ ಪಾರ್ಮ ಬೆಲೆ 500.00 ರೂ.ಗಳು ನಿಗದಿಪಡಿಸಿದೆ**

(1) ದರಪಟ್ಟಿ ಅವಧಿ 24–01–2025 ರಿಂದ 05–02–2025 ರವರೆಗೆ (2) ಭರ್ತಿ ಮಾಡಿದ ಟೆಂಡರ್ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ 07–02–2025ರ ಮಧ್ಯಾಹ್ನ 12.30 ಗಂಟೆ (3) ದರಪಟ್ಟಿ ತೆರೆಯುವ ದಿನಾಂಕ 05.02.2025ರ ಮಧ್ಯಾಹ್ನ 12.30 ಗಂಟೆ (4) ಅರ್ಜಿ ಸಲ್ಲಿಸುವ ಆಸಕ್ತ ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು. (5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತರು ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಗಳನ್ನು ಸಲ್ಲಿಸಬಹುದಾಗಿದೆ. (6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳ ಮಾಹಿತಿಗಾಗಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಾಲಯ ಅಡರಕಟ್ಟಿ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

**ಸಹಿ/–ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಅಡರಕಟ್ಟಿ**
**ಸಹಿ/–ಅಧ್ಯಕ್ಷರು ಗ್ರಾಮ ಪಂಚಾಯತಿ ಅಡರಕಟ್ಟಿ**

ವಾ.ಸಾ.ಇ/ಗದಗ/560/ದೇಶಪಾಂಡೆಪಬ್ಲಿಸಿಟಿ/2024–25



## ಗ್ರಾಮ ಪಂಚಾಯತ ಕಾರ್ಯಾಲಯ, ಕಳಸಾಪೂರ

ತಾಲೂಕ :– ಗದಗ ಜಿಲ್ಲಾ :– ಗದಗ ಸಂ.

ಗ್ರಾ.ಪಂ.ಕ/ಮ.ಗಾ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿನಾಂಕ: 24/01/2025

**–: ದರಪಟ್ಟಿ ಪ್ರಕಟಣೆ :–**

ಅಧ್ಯಕ್ಷರು/ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಳಸಾಪೂರ ಇವರು 2024–25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಸಾರಿಗೆ ನಗರದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶೌಚಾಲಯ ನಿರ್ಮಾಣ | 129780 | 500 | ಖಾಲಿ ಟೆಂಡರ್ ಫಾರಂಗಳನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸತಕ್ಕದ್ದು. |
| 2 | ಕಳಸಾಪೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶೌಚಾಲಯ ನಿರ್ಮಾಣ | 77901 | 500 | |
| 3 | ಆದಿತ್ಯ ನಗರದ ಬಿ.ಎಚ್.ಸಾಸ್ವಿಹಳ್ಳಿಯವರ ಮನೆಯಿಂದ ಯಲ್ಲಮ್ಮ ಬಿರಾದಾರ ಇವರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 155329 | 500 | |
| 4 | ಆದಿತ್ಯ ನಗರದ ಎಮ್.ಎಫ್.ಬಳ್ಳೊಳ್ಳಿಯವರ ಮನೆಯಿಂದ ಬಿ.ಎಚ್.ಸಾಸ್ವಿಹಳ್ಳಿಯವರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 155329 | 500 | |
| 5 | ಆದಿತ್ಯ ನಗರದ ವೀರನಗೌಡ ದೊಡ್ಡಗೌಡ್ರು ಮನೆಯಿಂದ ಎಮ್.ಎಫ್.ಬಳ್ಳೊಳ್ಳಿ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 230527 | 500 | |
| 6 | ಲಕ್ಷ್ಮೇಶ್ವರ ಮುಖ್ಯ ರಸ್ತೆಯಿಂದ ವೀರನಗೌಡ ದೊಡ್ಡಗೌಡ್ರು ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 216856 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : 27/01/2025 ರಿಂದ 04/02/2025 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : 05/02/2025 ಮುಂಜಾನೆ 10.00 ಗಂಟೆಗೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ : 05/02/2025 ಮಧ್ಯಾಹ್ನ 4.00 ಗಂಟೆ.

**ನಿಬಂಧನೆಗಳು :** 1) ಷರತ್ತು/ನಿಬಂಧನೆಗಳಿಗೆ,ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಗ್ರಾಮ ಪಂಚಾಯತ ಕಛೇರಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/– **ಪಂಚಾಯತ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತ ಕಳಸಾಪೂರ

ಸಹಿ/– **ಅಧ್ಯಕ್ಷರು** ಗ್ರಾಮ ಪಂಚಾಯತ ಕಳಸಾಪೂರ



## ಗ್ರಾಮ ಪಂಚಾಯತ ಕಾರ್ಯಾಲಯ, ಚಿಕ್ಕಹಂದಿಗೋಳ

ತಾಲೂಕ :– ಗದಗ ಜಿಲ್ಲಾ :– ಗದಗ

ಗದಗ ಸಂ.ಗ್ರಾ.ಪಂ.ಚಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024–25 ದಿ: 24/01/2025

**–: ದರಪಟ್ಟಿ ಪ್ರಕಟಣೆ :–**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಚಿಕ್ಕಹಂದಿಗೋಳ ಇವರು 2024– 25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ದುಂದೂರ ಗ್ರಾಮದ ಮೌನೇಶ ಬಡಿಗೇರವರ ಮನೆಯಿಂದ ಫಕ್ಕಿರೇಶ ಉಪ್ಪಿನವರ ಮನೆವರೆಗೆ ಸಿ. ಸಿ. ರಸ್ತೆ ನಿರ್ಮಾಣ. | 73,812.00 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು. |
| 2 | ದುಂದೂರ ಗ್ರಾಮದ ಸ.ಹಿ.ಪ್ರಾ. ಶಾಲೆಗೆ ಶೌಚಾಲಯ ನಿರ್ಮಾಣ. | 1,37,165.00 | 500 | |
| 3 | ದುಂದೂರ ಗ್ರಾಮದ ಶಾಲೆಗೆ ಹೋಗುವ ಮುಖ್ಯ ರಸ್ತೆ ಸಿ.ಸಿ ಮಾಡುವುದು. | 2,23,974.00 | 500 | |
| 4 | ದುಂದೂರ ಗ್ರಾಮದ ಎಸ್.ಸಿ. ಕಾಲೋನಿಯಲ್ಲಿ ಸಿ. ಸಿ. ರಸ್ತೆ ನಿರ್ಮಾಣ | 69,724.00 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ: 25/01/2025 ರಿಂದ 4/02/2025 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 5/02/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ: 6/02/2025 ರ ಮಧ್ಯಾಹ್ನ 3.00 ಗಂಟೆ

ನಿಬಂಧನೆಗಳು : 1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಚಿಕ್ಕಹಂದಿಗೋಳದ ಮಾಹಿತಿ ಪಡೆಯಬಹುದಾಗಿದೆ.

ಸಹಿ/– **ಪಂಚಾಯತ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತ ಚಿಕ್ಕಹಂದಿಗೋಳ

ಸಹಿ/– **ಅಧ್ಯಕ್ಷರು** ಗ್ರಾಮ ಪಂಚಾಯತ ಚಿಕ್ಕಹಂದಿಗೋಳ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka